ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 176

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶನಿವಾರ: 20–06–2026

# ಅಳಿವಿನ ಅಂಚಿನಲ್ಲಿರುವ ಮಾನ್ವಿ ಕೋಟೆ

## ಶತಮಾನಗಳ ಇತಿಹಾಸ ಹೇಳುವ ಕೋಟೆ, ಬಾವಿ, ಬುರುಜುಗಳ ಸಂರಕ್ಷಣೆಗೆ ಸಾರ್ವಜನಿಕರ ಆಗ್ರಹ


ಮಾನ್ವಿ ಕೋಟೆಯ ಶಿತಿಲಗೊಂಡ ಕೋಟೆಗೋಡೆ

ಮಾನ್ವಿ: ರಾಯಚೂರು ಜಿಲ್ಲೆಯ ಐತಿಹಾಸಿಕ ಮಾನ್ವಿ ಪಟ್ಟಣದ ಹೆಮ್ಮೆಯ ಸಂಕೇತವಾಗಿರುವ ಮಾನ್ವಿ ಕೋಟೆಯು ಇಂದು ನಿರ್ಲಕ್ಷ್ಯದ ಪರಿಣಾಮವಾಗಿ ತನ್ನ ವೈಭವ ಕಳೆದುಕೊಳ್ಳುತ್ತಿದ್ದು, ಶತಮಾನಗಳ ಇತಿಹಾಸವನ್ನು ಹೊತ್ತಿರುವ ಸ್ಮಾರಕಗಳು ಅಳಿವಿನ ಅಂಚಿಗೆ ತಲುಪಿವೆ. ಕಲ್ಯಾಣ ಚಾಲುಕ್ಯರ ಕಾಲದಲ್ಲಿ ನಿರ್ಮಾಣಗೊಂಡಿದೆ ಎನ್ನಲಾಗುವ ಈ ಕೋಟೆಯು ಸುಮಾರು 3.5 ಕಿಲೋಮೀಟರ್ ಉದ್ದದ ಕಲ್ಲಿನ ಗೋಡೆಗಳನ್ನು ಹೊಂದಿದ್ದು, ಉತ್ತರ ಕರ್ನಾಟಕದ ಪ್ರಮುಖ ಐತಿಹಾಸಿಕ ತಾಣಗಳಲ್ಲಿ ಒಂದಾಗಿದೆ.

ಬೆಟ್ಟದ ತುದಿಯಲ್ಲಿ ನಿರ್ಮಿಸಲಾದ ಈ ಕೋಟೆಯು ಒಮ್ಮೆ ರಾಜರ ಆಳ್ವಿಕೆಯ ವೈಭವವನ್ನು ಪ್ರತಿಬಿಂಬಿಸುತ್ತಿತ್ತು. ಶತ್ರುಗಳ ಚಲನವಲನಗಳ ಮೇಲೆ ನಿಗಾ ವಹಿಸಲು ನಿರ್ಮಿಸಲಾದ ಕಿಲ್ಲಾ (ಹುಡೆ), ಮೂರು ಕಾವಲು ಬುರುಜುಗಳು, ಕೋಟೆಗೋಡೆಗಳು ಮತ್ತು ಇತರೆ ರಕ್ಷಣಾತ್ಮಕ ಕಟ್ಟಡಗಳು ಕಾಲದ ಹೊಡೆತಕ್ಕೆ ಸಿಲುಕಿ ಶಿಥಿಲಗೊಂಡಿವೆ. ಅನೇಕ ಕಡೆಗಳಲ್ಲಿ ಗೋಡೆಗಳು ಕುಸಿದು ಬೀಳುವ ಹಂತಕ್ಕೆ ತಲುಪಿದ್ದು, ಪುರಾತತ್ವ ಇಲಾಖೆಯ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿವೆ.

## ಶಿಥಿಲಗೊಂಡ ಬುರುಜುಗಳು

ಶತ್ರುಗಳ ದಾಳಿಯ ಸಂಧರ್ಬದಲ್ಲಿ ನಿಗವಹಿಸಲು ನಿರ್ಮಿಸಿದ ಮೂರು ಬುರುಜುಗಳು ಇಂದು ಸಂಪೂರ್ಣ ಶಿಥಿಲಗೊಂಡಿವೆ. ಗೋಡೆಗಳು ಕಿಸಿದು ಬೀಳುವ ಸ್ಥಿತಿಯಲ್ಲಿದ್ದು ತಕ್ಕಣ ಸಂರಕ್ಷಣೆ ಅಗತ್ಯವಾಗಿದೆ


ಶಿಥಿಲಗೊಂಡ ಬುರುಜು

## ಮಾನ್ವಿ ಕೋಟೆಯ ವಿಶೇಷತೆಗಳು

–3.5 ಕಿ.ಮೀ. ಉದ್ದದ ಐತಿಹಾಸಿಕ ಕೋಟೆ
–ಕಲ್ಯಾಣ ಚಾಲುಕ್ಯರ ಕಾಲದ ನಿರ್ಮಾಣ
–ಮೂರು ಶಿಥಿಲಗೊಂಡ ಬುರುಜುಗಳು
–ಐದು ಪುರಾತನ ಬಾವಿಗಳು
–ಪ್ರಸಿದ್ಧ 'ಸಂಜೀವಿನಿ ಕೊಳ'
–ರಂಗೋಲಿ ಗುಡ್ಡದ ಅಪರೂಪದ ಚಿತ್ರಗಳು
–ಕೋಟೆ ಹನುಮಪ್ಪ, ಕಥಾಲ ಹನುಮಪ್ಪ, ಮಲ್ಲಿಕಾರ್ಜುನ, ಭ್ರಮರಾಂಬ ದೇವಿ, ಶಂಕರಲಿಂಗ ಹಾಗೂ ಬಸವಣ್ಣ ದೇವಸ್ಥಾನಗಳಿವೆ.
–ಐತಿಹಾಸಿಕ ಸಬ್ಬಲಿ ಸಾಬ್ ದರ್ಗಾ
–ರಂಗೋಲಿ ಗುಡ್ಡದ ರಹಸ್ಯಮಯ ಚಿತ್ರಗಳು

"ಮಾನ್ವಿ ಕೋಟೆ ಕೇವಲ ಕಟ್ಟಡವಲ್ಲ, ಅದು ನಮ್ಮ ಇತಿಹಾಸದ ಜೀವಂತ ಸಾಕ್ಷಿ". ಸಂರಕಿಸಿದರೆ ಮುಂದಿನ ಪೀಳಿಗೆಗೆ ನಮ್ಮ ಫರಂಪರೆಯನ್ನು ತೋರಿಸಬಹುದಾಗಿದೆ

–ಸ್ಥಳೀಯರು

## ಕೋಟೆಯೊಳಗಿನ ಅಮೂಲ್ಯ ಜಲಸಂಪತ್ತು ಪಾಳು

ಮಾನ್ವಿ ಕೋಟೆಯ ಪ್ರಮುಖ ಆಕರ್ಷಣೆಯಾದ ಐದು ಪುರಾತನ ಬಾವಿಗಳು ಇಂದು ಸ್ವಚ್ಛತೆಯ ಕೊರತೆಯಿಂದ ಪಾಳುಬಿದ್ದಿವೆ. ಇವುಗಳಲ್ಲಿ 'ಸಂಜೀವಿನಿ ಕೊಳ' ವಿಶೇಷ ಮಹತ್ವ ಪಡೆದಿದ್ದು, ಅದರ ನೀರು ಆರೋಗ್ಯವರ್ಧಕ ಗುಣಗಳನ್ನು ಹೊಂದಿದೆ ಎನ್ನುವ ನಂಬಿಕೆ ಸ್ಥಳೀಯರಲ್ಲಿ ಇದೆ. ಒಂದು ಕಾಲದಲ್ಲಿ ನೂರಾರು ಜನರ ದಾಹ ನೀಗಿಸಿದ್ದ ಈ ಬಾವಿಗಳು ಇಂದು ಕಳೆ, ಪೊದೆಗಳು ಮತ್ತು ಮಣ್ಣಿನಿಂದ ಆವೃತಗೊಂಡಿವೆ.

ಕೋಟೆ ಪ್ರದೇಶದ ಕೆಳಭಾಗದಲ್ಲಿರುವ ಮತ್ತೊಂದು ಪುರಾತನ ಬಾವಿಯೂ ನಿರ್ವಹಣೆ ಇಲ್ಲದೆ ಹಾಳಾಗುತ್ತಿದೆ. ಸೂಕ್ತ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾಮಗಾರಿ ಕೈಗೊಂಡರೆ ಈ ಜಲಮೂಲಗಳು ಪ್ರವಾಸಿಗರನ್ನು ಸೆಳೆಯುವ ಪ್ರಮುಖ ಆಕರ್ಷಣೆಯಾಗುವ ಸಾಧ್ಯತೆಯಿದೆ.


ಪುರಾತನ ಬಾವಿ–ಸಂರಕ್ಷಣೆ ಇಲ್ಲದೆ ಪಾಳು


ಸಂಜೀವಿನಿ ಕೊಳ – ಕಳೆ, ಪೊದೆಗಳು ಮತ್ತು ಮಣ್ಣಿನಿಂದ ಆವೃತಗೊಂಡಿರು ದೃಶ್ಯ

## ರಂಗೋಲಿ ಗುಡ್ಡದ ರಹಸ್ಯಮಯ ಚಿತ್ರಗಳು

ಮಾನ್ವಿ ಕೋಟೆಯ ಮತ್ತೊಂದು ವಿಶೇಷತೆ ರಂಗೋಲಿ ಗುಡ್ಡ. ಬೆಟ್ಟದ ಗವಿಯ ಬಂಡೆಗಳ ಮೇಲೆ ಕೆಂಪು ಬಣ್ಣದಲ್ಲಿ ಬಿಡಿಸಲಾದ ಅಪರೂಪದ ರೇಖಾಚಿತ್ರಗಳು ಇತಿಹಾಸ ಸಂಶೋಧಕರ ಗಮನ ಸೆಳೆದಿವೆ.

ಮದ್ದಳೆ ವಾದಕರು, ಪಲ್ಲಕ್ಕಿ, ಕುದುರೆ, ನಂದಿ, ಸೂರ್ಯ–ಚಂದ್ರ ಹಾಗೂ ಉತ್ಸವದ ಮೆರವಣಿಗೆಗಳ ಚಿತ್ರಗಳು ವಿಜಯನಗರ ಕಾಲದ ಸಂಸ್ಕೃತಿ ಮತ್ತು ಜೀವನಶೈಲಿಯನ್ನು ಬಿಂಬಿಸುತ್ತವೆ. ಶತಮಾನಗಳಾದರೂ ಈ ಚಿತ್ರಗಳ ಬಣ್ಣ ಮಾಸದೇ ಉಳಿದಿರುವುದು ಆಶ್ಚರ್ಯ ಮೂಡಿಸುತ್ತದೆ.

ಆದರೆ ಈ ಅಮೂಲ್ಯ ಪರಂಪರೆಗೆ ಯಾವುದೇ ರಕ್ಷಣಾ ವ್ಯವಸ್ಥೆ ಇಲ್ಲದಿರುವುದು ಇತಿಹಾಸಾಸಕ್ತರ ಆತಂಕಕ್ಕೆ ಕಾರಣವಾಗಿದೆ.

**ಧಾರ್ಮಿಕ ಸೌಹಾರ್ದದ ಸಂಕೇತ**–ಕೋಟೆ ಪ್ರದೇಶದಲ್ಲಿ ಕೋಟೆ ಹನುಮಪ್ಪ, ಕಥಾಲ ಹನುಮಪ್ಪ, ಮಲ್ಲಿಕಾರ್ಜುನ, ಭ್ರಮರಾಂಬ ದೇವಿ, ಶಂಕರಲಿಂಗ ಹಾಗೂ ಬಸವಣ್ಣ ದೇವಸ್ಥಾನಗಳಿವೆ. ಇದೇ ಪ್ರದೇಶದಲ್ಲಿ ಐತಿಹಾಸಿಕ ಸಬ್ಬಲಿ ಸಾಬ್ ದರ್ಗಾ ಕೂಡ ಇರುವುದರಿಂದ ಇದು ಧಾರ್ಮಿಕ ಸೌಹಾರ್ದದ ಪ್ರತೀಕವಾಗಿ ಗುರುತಿಸಿಕೊಂಡಿದೆ.
ವರ್ಷಪೂರ್ತಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿದ್ದರೂ, ಮೂಲಭೂತ ಸೌಲಭ್ಯಗಳ ಕೊರತೆ ಭಕ್ತರಿಗೆ ತೊಂದರೆಯಾಗಿ ಪರಿಣಮಿಸಿದೆ.

**ಪ್ರವಾಸೋದ್ಯಮ ಕೇಂದ್ರವಾಗುವ ಸಾಮರ್ಥ್ಯ**- ಮಾನ್ವಿ ಕೋಟೆ, ಹೊಕ್ರಾಣಿ ಕೆರೆ, ಶಾಹಿ ಮಸೀದಿ, ಪುರಾತನ ದೇವಾಲಯಗಳು, ಬಾವಿಗಳು ಹಾಗೂ ರಂಗೋಲಿ ಗುಡ್ಡವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿದರೆ ರಾಜ್ಯದ ಪ್ರಮುಖ ಪ್ರವಾಸಿ ತಾಣವಾಗಿ ರೂಪುಗೊಳ್ಳುವ ಸಾಮರ್ಥ್ಯ ಹೊಂದಿದೆ. ಆದರೆ ಮಾರ್ಗದರ್ಶಕ ಫಲಕಗಳು, ಕುಡಿಯುವ ನೀರು, ವಿಶ್ರಾಂತಿ ಸ್ಥಳಗಳು ಹಾಗೂ ಸ್ವಚ್ಛತಾ ವ್ಯವಸ್ಥೆಗಳ ಕೊರತೆಯಿಂದ ಪ್ರವಾಸಿಗರ ಸಂಖ್ಯೆ ಕಡಿಮೆಯಾಗಿದೆ.

**ಸಂರಕ್ಷಣೆಗೆ ಒತ್ತಾಯ**- ಇತಿಹಾಸದ ಅಮೂಲ್ಯ ಸಂಪತ್ತಾಗಿರುವ ಮಾನ್ವಿ ಕೋಟೆಯನ್ನು ಸಂರಕ್ಷಿಸಲು ತಕ್ಷಣ ವಿಶೇಷ ಯೋಜನೆ ರೂಪಿಸಬೇಕು. ಶಿಥಿಲಗೊಂಡ ಬುರುಜುಗಳು, ಕೋಟೆಗೋಡೆಗಳು, ಬಾವಿಗಳು ಹಾಗೂ ಪುರಾತನ ಕಟ್ಟಡಗಳ ಪುನಶ್ಚೇತನ ಕಾರ್ಯ ಕೈಗೊಳ್ಳಬೇಕು. ರಂಗೋಲಿ ಗುಡ್ಡದ ಚಿತ್ರಗಳಿಗೆ ರಕ್ಷಣೆ ಒದಗಿಸಿ, ಪ್ರವಾಸೋದ್ಯಮ ಮತ್ತು ಪುರಾತತ್ವ ಇಲಾಖೆಗಳು ಜಂಟಿಯಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ದೇವದುರ್ಗ ಪಟ್ಟಣಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ; ಪರಿಶೀಲನೆ







ಧೈರ್ಯದ ದಾರಿ

**ರಾಯಚೂರು ಜೂನ್ 19:** ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಗುರುವಾರ ದಂದು ಜಿಲ್ಲೆಯ ದೇವದುರ್ಗದ ತಹಶೀಲ್ದಾರ್ ಕಚೇರಿ ಸೇರಿದಂತೆ ವಿವಿಧ ಕಡೆಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು. ಮೊದಲು ದೇವದುರ್ಗದ ತಹಶೀಲ್ದಾರ್ ಕಚೇರಿಗೆ ಭೇಟಿ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗ ಇಲಾಖೆ, ಕಂದಾಯ ವಿವಿಧ ಶಾಖೆಗೆ ಭೇಟಿ ದಾಖಲಾತಿಗಳನ್ನು ಪರಿಶೀಲಿಸಿದರು.

ನಂತದ ತಹಶೀಲ್ದಾರರ ಕಚೇರಿಯ ಸಭಾಂಗಣದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿ, ದೇವದುರ್ಗ ತಾಲೂಕು ಸಮಗ್ರ ಅಭಿವೃದ್ಧಿಗಾಗಿ ಕೈಗೊಳ್ಳಬೇಕಾದ ಕ್ರಮಗಳು, ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಕುರಿತು ಹಾಗೂ ದೇವದುರ್ಗ ತಾಲೂಕಿನ ಮುಂದಿನ ಅಭಿವೃದ್ಧಿಗಾಗಿ ಬೇಕಾಗುವ ಅನುದಾನ ಬಗ್ಗೆ ವಿವಿಧ ಇಲಾಖೆಯ ಅಧಿಕಾರಿಗಳಿಂದ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಸರ್ಕಾರದ ವಿವಿಧ ಯೋಜನೆಗಳಿಗೆ ಸಾರ್ವಜನಿಕರಿಂದ ಸಲ್ಲಿಸುವ ಅರ್ಜಿಗಳನ್ನು ನಿಗದಿತ ಸಮಯದೊಳಗೆ ವಿಲೇವಾರಿ ಮಾಡಿ, ಅವರಿಗೆ ಸೌಲಭ್ಯವನ್ನು ದೊರಕಿಸಬೇಕು.

ಮುಂದಿನ ದಿನಗಳಲ್ಲಿ ದೇವದುರ್ಗ ಪಟ್ಟಣ ಸೇರಿದಂತೆ ತಾಲೂಕಿನ ಗ್ರಾಮೀಣ ಭಾಗದಲ್ಲಿ ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗ್ರತೆ ವಹಿಸಬೇಕು. ಮಳೆ ನೀರು ಸರಾಗವಾಗಿ ಹರಿಯುವಂತಾಗಲು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಾಲುವೆ, ಚರಂಡಿಗಳನ್ನು ಸ್ವಚ್ಛಗೊಳಿಸುವ ಕಾರ್ಯ ಆಗಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಪ್ರಮಾಣಿಕ ಸೇವೆ ಸಲ್ಲಿಸಬೇಕು. ಯಾವುದೇ ದೂರುಗಳು ಬರದಂತೆ ಕರ್ತವ್ಯ ನಿರ್ವಹಿಸಬೇಕು. ಪಿಂಚಣಿ ಸೌಲಭ್ಯವ್ನನು ಅರ್ಹ ಫಲಾನುಭವಿಗಳಿಗೆ ಮುಟ್ಟಿಸಲು ಸೂಕ್ತ ಕ್ರಮವಹಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಂತರ ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಕೊಠಡಿಗಳಿಗೆ ತೆರಳಿ ಒಂದೊಂದು ಸಮಸ್ಯೆಗಳು ಆಲಿಸಿದರು. ಶಾಲಾ-ಕಾಲೇಜುಗಳು ಆರಂಭವಾಗಿದ್ದು, ಜಾತಿ ಪ್ರಮಾಣ ಪತ್ರ ಸೇರಿದಂತೆ ಇತರೆ ಪ್ರಮಾಣ ಪತ್ರಗಳು ಸಕಾಲಕ್ಕೆ ವಿದ್ಯಾರ್ಥಿಗಳಿಗೆ ಮುಟ್ಟಿಸುವ ಕೆಲಸ ಮಾಡಬೇಕು. ಯಾವುದೇ ಕಾರಣಕ್ಕೆ ವಿದ್ಯಾರ್ಥಿಗಳು ಶಾಲೆ, ಕಾಲೇಜ್ ಬಿಟ್ಟು ಕಚೇರಿಗೆ ಅಲೆಯದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ವಸತಿ ನಿಯಲಕ್ಕೆ ಭೇಟಿ: ದೇವದುರ್ಗ ಪಟ್ಟಣದ ಹೊರವಲಯದ ರಾಯಚೂರು ರಸ್ತೆಯ ಹತ್ತಿರುವ ವಿವಿಧ ವಸತಿ ನಿಲಯಗಳಿಗೆ ಜಿಲ್ಲಾಧಿಕಾರಿ ಅವರು ಭೇಟಿ ನೀಡಿ, ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿವಿಧ ಸೌಲಭ್ಯಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ನಿಲಯದ ಕೊಠಡಿಗಳು, ಗ್ರಂಥಾಲಯ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಅಡುಗೆ ಮನೆ, ದಿನಸಿ ಸಾಮಗ್ರಿಗಳ ಉಗ್ರಾಣ ಇತರೆ ಸೌಲಭ್ಯಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ಪಡೆದು, ವಿದ್ಯಾರ್ಥಿಗಳಿಗೆ ಸರಕಾರದಿಂದ ಸಿಗುವ ಸೌಲಭ್ಯಗಳನ್ನು ಸರಿಯಾದ ರೀತಿಯಲ್ಲಿ ಕೊಡಬೇಕೆಂದರು,

ನಂತರ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದ ಜಿಲ್ಲಾಧಿಕಾರಿಗಳು ವಿದ್ಯಾರ್ಥಿಗಳ ಕನಸುಗಳು, ಗುರಿಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ಸಂವಾದ ನಡೆಸಿ ತಮ್ಮ ಸ್ಪೂರ್ತಿದಾಯಕ ಮಾತುಗಳ ಮೂಲಕ ವಿದ್ಯಾರ್ಥಿಗಳನ್ನು ಸರ್ವತೋಮುಖ ಬೆಳವಣಿಗೆ ಸಾಧಿಸಲು ಹುರಿದುಂಬಿಸಿದರು. ಇದಕ್ಕೂ ಮುಂಚೆ ದೇವದುರ್ಗ ಪಟ್ಟಣದ ಅಂಗನವಾಡಿ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಅರಕೇರಾ ತಹಶೀಲ್ದಾರ್ ಅಮರೇಶ, ತಾಲೂಕು ಆರೋಗ್ಯಾಧಿಕಾರಿ ಡಾ.ಬನದೇಶ್ವರ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಕೃಷಿ ಇಲಾಖೆಯಿಂದ ಅಧಿಕ ಸಾಂದ್ರತೆ ಹತ್ತಿ ಬೆಳೆ ಪದ್ದತಿ ಕುರಿತು ರೈತರಿಗೆ ಕಾರ್ಯಾಗಾರ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಗ್ಯಾಲಾಕ್ಸಿ ಫಂಕ್ಷನ್ ಹಾಲ್ ಸಭಾಂಗಣದಲ್ಲಿ ಕೃಷಿ ಇಲಾಖೆ, ಐ.ಸಿ.ಎ.ಆರ್. ಕೃಷಿ ವಿಜ್ಞಾನ ಕೇಂದ್ರ ರಾಯಚೂರು ಸಂಯುಕ್ತಾಶ್ರಯದಲ್ಲಿ ನಡೆದ ತಾಲೂಕು ಮಟ್ಟದ ಅಧಿಕ ಸಾಂದ್ರತೆ ಹತ್ತಿ ಪದ್ದತಿ ಕಾರ್ಯಗಾರವನ್ನು ತಾಲೂಕು ಸಹಾಯಕ ಕೃಷಿ ನಿರ್ದೇಶಕರಾದ ಗುರುನಾಥ ಭೂಸನೂರೆ ಉದ್ಘಾಟಿಸಿ ಮಾತನಾಡಿ ತಾಲೂಕಿನ ಹೆಚ್ಚಿನ ರೈತರು ಹತ್ತಿ ಬೆಳೆಯನ್ನು ಬೆಳೆಯುತ್ತಿದು ಹತ್ತಿ ಬೆಳೆ ರೈತರಿಗೆ ಅಗತ್ಯವಾದ ಕೃಷಿ ಮಾಹಿತಿಯನ್ನು ನೀಡುವುದಕ್ಕಾಗಿ ಹತ್ತಿ ಬೆಳೆಗಾರರರ ತಾಲೂಕು ಮಟ್ಟದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದು ಹತ್ತಿಯ ಸುಧಾರಿತ ಬೆಳೆ ಪದ್ದತಿಯನ್ನು ಕೃಷಿ ವಿಜ್ಞಾನಿಗಳಿಂದ ರೈತರಿಗೆ ತಿಳಿಸಿಕೊಡಲಾಗುವುದು ತಾಲೂಕಿನ ರೈತರ ಜಮೀನುಗಳಿಗೆ ಕೃಷಿ ಅಧಿಕಾರಿಗಳು ಭೇಟಿ ನೀಡಿ ರೈತರಿಗೆ ಉಪಯುಕ್ತವಾದ ಮಾಹಿತಿ ನೀಡಲಿದ್ದಾರೆ ಹತ್ತಿ ಬೆರಳೆಯುವ ರೈತರು ಕಡ್ಡಾಯವಾಗಿ ಕಾಪಸ್ ಆಫ್‌ನಲ್ಲಿ ಹತ್ತಿ ಬೆಳೆಯನ್ನು ನಮೂದಿಸಿದಲ್ಲಿ ಮಾತ್ರ ಹತ್ತಿ ಖರೀದಿ ಕೇಂದ್ರದಲ್ಲಿ ಹತ್ತಿಯನ್ನು ಮಾರಾಟಮಾಡುವುದಕ್ಕೆ ರೈತರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರ ರಾಯಚೂರು ಮುಖ್ಯಸ್ಥರಾದ ಡಾ.ತಿಮ್ಮಣ್ಣ ನಾಯಕ ಮಾತನಾಡಿ ಇಂದಿನ ದಿನಗಳಲ್ಲಿ ಕೃಷಿ ಭೂಮಿಯಲ್ಲಿ ಇಳಿಕೆಯಾಗಿದೆ ಹೆಚ್ಚಾಳವಾಗಿರುವ ಜನಸಂಖ್ಯೆಗೆ ಅಗತ್ಯ ಕೃಷಿ ಉತ್ಪನ್ನಗಳನ್ನು ಉತ್ಪದಿಸುವುದಕ್ಕೆ ರೈತರಿಗೆ ಅಗತ್ಯವಿರುವ ಸುಧಾರಿತ ಕೃಷಿ ಪದ್ದತಿಗಳನ್ನು ಕೃಷಿ ವಿಜ್ಞಾನ ಕೇಂದ್ರ ರಾಯಚೂರು ನಿರಂತರವಾಗಿ ಪರಿಚಯಿಸುತ್ತ ಬಂದಿದೆ. ಹತ್ತಿ ರೈತರಿಗೆ ನೂತನ ಹತ್ತಿ ಕೃಷಿ ಪದ್ದತಿಯಾದ ಆಧಿಕ ಸಾಂದ್ರತೆ ಹತ್ತಿ ಪದ್ದತಿಯನ್ನು ಅಳವಾಡಿಸಿಕೊಂಡಲ್ಲಿ ಕಡಿಮೆ ಅವಧಿಯಲ್ಲಿ ಹೆಚ್ಚಿನ ಇಳುವರಿನ್ನು ಪಡೆಯಬಹುದು ಆಧಿಕ ಸಾಂದ್ರತೆ ಹತ್ತಿ ಪದ್ದತಿಗೆ ಸೂಕ್ತವಾದ ಹೆ.ಚ್.ಡಿ.ಪಿ.ಎಸ್. ಹೈಬ್ರೀಡ್ ಹತ್ತಿ ಬೀಜಗಳನ್ನು ಎಕರೆಗೆ 6 ಪ್ಯಾಕೇಟ್ ಬೀತ್ತನೆ ಬೀಜವನ್ನು ಸಾಲಿನಿಂದ ಸಾಲಿಗೆ 3 ಅಡಿ ಗಿಡದಿಂದ ಗಿಡಕ್ಕೆ ಅರ್ಧ ಅಡಿಯಂತೆ ಬೀತನೆ ಮಾಡಿದಲ್ಲಿ ಒಂದು ಎಕರೆಗೆ 29 ಸಾವಿರಕ್ಕೂ ಹೆಚ್ಚು ಗಿಡಗಳು ಕೂಡುತ್ತವೆ ಹೆಚ್ಚು ಹತ್ತಿರದಲ್ಲಿ ನಾಟಿ ಮಾಡುವುದರಿಂದ ಗಿಡಗಳ ಸಂಖ್ಯೆ ಹೆಚ್ಚುವುದರಿಂದ ಪ್ರತಿ ಗಿಡಕ್ಕೆ 10 ರಿಂದ 15 ಕಾಯಿಗಳು ಬಂದರು ಕೂಡ ಎಕರೆಗೆ 22 ಕ್ವಿಂಟಾಲ್ ವರೆಗೆ ಇಳುವರಿಯನ್ನು ಪಡೆಯಬಹುದಾಗಿದೆ. ಈ ಪದ್ದತಿಯಲ್ಲಿ ಕಳೆಯು ಕಡಿಮೆ ಇರುತ್ತದೆ. ರಸಗೊಬ್ಬರ ಬಳಕೆ ಕಡಿಮೆ, ಕೀಟನಾಶಕಗಳ ಬಳಕೆ ಸಮರ್ಥವಾಗಿ ಬಳಸುವುದಕ್ಕೆ ಅನುಕೂಲವಾಗುತ್ತದೆ 120 ದಿನಗಳಲ್ಲಿ ಏಕಕಾಲಕ್ಕೆ ಹತ್ತಿ ಕಾಯಿಗಳು ಹೊಡೆಯುವುದರಿಂದ ಬಿಡಿಸುವುದಕ್ಕೆ ಸುಲಾಭವಾಗಿರುತ್ತದೆ ಯಾಂತ್ರಿಕ ಕೃಷಿಗೆ ಈ ಪದ್ದತಿ ಸೂಕ್ತವಾಗಿದೆ. ಅಲ್ಪವಾದಿ ಬೆಳೆ ಪದ್ದತಿಯಾಗಿದು ಗುಲಾಭಿ ಕಾಯಿಕೊರಕದ ಬಾದೆ ಕಡಿಮೆ ಇರುತ್ತದೆ. ಮೂರು ಹಂತದಲ್ಲಿ ಮೂರು ಬಾರಿ ಸಸ್ಯ ಬೆಳವಣಿಗೆಯ ನಿಯಂತ್ರಕ ಮೆಪಿಕ್ಯಾಟ್ ಕ್ಲೋರೈಡ್ ಸಿಂಪರಣೆ ಮಾಡಿ ಸಸ್ಯದ ಬೆಳವಣಿಗೆಯನ್ನು ನಿಯಂತ್ರಿಸಿ ಮೊದಲು ರೂಪಗೊಂಡ ಕಾಯಿಗಳನ್ನು ಉಳಿಸಿಕೊಳ್ಳಬೇಕು. ಕೀಟ ಬಾದೆ ಕಂಡುಬಂದಲ್ಲಿ ಕೃಷಿ ವಿಜ್ಞಾನಿಗಳ ಸಲಹೆಯಂತೆ ಕೀಟನಾಶಕವನ್ನು ಸಿಂಪರಣೆ ಮಾಡಬೇಕು. ಸಾಂಪ್ರದಾಯಿಕ ಹತ್ತಿ ಬೆಳೆ ಪದ್ದತಿಗಿಂತ ಶೇ 30 ರಷ್ಟು ಹೆಚ್ಚು ಇಳುವರಿಯನ್ನು ಪಡೆಯಬಹುದು.ಏಕಕಾಲಕ್ಕೆ ಹತ್ತಿ ಕಟಾವಿಗೆ ಬರುತ್ತದೆ.ಕೃಷಿ ವೆಚ್ಚದಲ್ಲಿ ಕಡಿತ ಹೆಚ್ಚಿನ ಇಳುವರಿಯಿಂದ ಅಧಿಕ ಲಾಭ ರೈತರಿಗೆ ದೊರೆಯುತ್ತದೆ ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿ ಡಾ.ಮಲ್ಲರೆಡ್ಡಿ ,ನಿವೃತ್ತ ಕೃಷಿ ಪ್ರಾಧ್ಯಾಪಕರಾದ ಡಾ.ಎಂ.ಭೀಮಣ್ಣ, ಹೆಚ್ಚಿನ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಮಾನ್ವಿ ತಾಲೂಕಿನ ಮಲ್ಲಟ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಮಾರುತಿ, ಕಾವಿತಾಳ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಶಿವಶರಣ, ಹಿರೇಕೋಟ್ನೆಕಲ್ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಶಿವಕುಮಾರ, ಕಲ್ಲೂರು ಹಾಗೂ ಕುರ್ಡಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಭಿಮರಾಯ ಪಡದಹಳ್ಳಿ ,ಪ್ರವಾರ್ಧನ ಸೀಡ್ಸ್ ಸಂಸ್ಥೆಯ ಅಧಿಕಾರಿ ನಾಗರಾಜ ಪಾಟೀಲ್, ಕಾವೇರಿ ಸೀಡ್ಸ್ ಸಂಸ್ಥೆಯ ಅಧಿಕಾರಿ ದೇವರಾಜ ಪಾಟೀಲ್ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳ ಪ್ರಗತಿಪರ ರೈತರು ಕಾರ್ಯಗಾರದಲ್ಲಿ ಭಾಗವಹಿಸಿದರು.

ಕೃಷಿ ವಿಜ್ಞಾನಿಗಳೊಂದಿಗೆ ಹತ್ತಿ ಬೆಳೆ ಕುರಿತು ನಡೆದ ರೈತರ ಸಂವಾದದಲ್ಲಿ ರೈತರ ಪ್ರಶ್ನೆಗಳಿಗೆ ಕೃಷಿ ವಿಜ್ಞಾನಿಗಳು ಸೂಕ್ತವಾದ ಮಾಹಿತಿಯನ್ನು ನೀಡಿದರು.

# ಯೋಗಾಸನ ಮತ್ತು ಪ್ರಬಂಧ ಸ್ಪರ್ಧೆ



ಧೈರ್ಯದ ದಾರಿ

**ಮಾನ್ವಿ,** ನಗರದ ಸಿಂಧನೂರು ರಸ್ತೆಯ ಧ್ಯಾನಮಂದಿರದಲ್ಲಿ ಜೂನ್ 19ರಂದು ಯೋಗ ಸನ್ನಿಧಿ ಜ್ಞಾನ ವಿದ್ಯಾ ಪೀಠ ಟ್ರಸ್ಟ್, ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜ್ ಹಾಗೂ ಲಯನ್ಸ್ ಕ್ಲಬ್ ಇವರುಗಳ ಸಂಯುಕ್ತಾಶ್ರಯದಲ್ಲಿ ಶಾಲಾ ಮಕ್ಕಳಿಗಾಗಿ ಉಚಿತ ಯೋಗಾಸನ ಹಾಗೂ ಪ್ರಬಂಧ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ರಾಯಚೂರು ಜಿಲ್ಲಾ ಆಯುಷ್ ಆಸ್ಪತ್ರೆಯ ನ್ಯಾಚುರಪಥಿ ಹಾಗೂ ಯೋಗ ಇಲಾಖೆಯ ಅಧಿಕಾರಿಗಳಾದ ಡಾ. ಪೂಜಾ ಅವರು, ಮಕ್ಕಳಲ್ಲಿ ಕೇವಲ ಜ್ಞಾನ ಮಾತ್ರವಲ್ಲದೆ ನೈತಿಕ ಮೌಲ್ಯಗಳನ್ನು ಬಿತ್ತುವಲ್ಲಿ ಇಂತಹ ಕಾರ್ಯಕ್ರಮಗಳು ಪ್ರಮುಖ ಪಾತ್ರ ವಹಿಸುತ್ತವೆ ಮತ್ತು ಯೋಗವು ಮಕ್ಕಳ ದೈಹಿಕ ಆರೋಗ್ಯ ಹಾಗೂ ಮಾನಸಿಕ ಸಮತೋಲನಕ್ಕೆ ಸಹಕಾರಿಯಾಗಿದೆ ಎಂದು ಹೇಳಿದರು. ಮುಂದುವರಿದು ಮಾತನಾಡಿದ ಅವರು, ಮಾನ್ವಿಯ ಖ್ಯಾತ ಯೋಗ ಗುರುಗಳಾದ ಅನ್ನದಾನಯ್ಯನವರು ಯಾವುದೇ ಸ್ವಾರ್ಥವಿಲ್ಲದೇ ಇಂತಹ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಜಿಲ್ಲೆ ಮತ್ತು ತಾಲ್ಲೂಕಿನ ಕೀರ್ತಿಯನ್ನು ಎತ್ತರಕ್ಕೆ ಕೊಂಡೊಯ್ಯಲು ಸದಾ ಸ್ಫೂರ್ತಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಲಯನ್ಸ್ ಕ್ಲಬ್‌ನ ಕಾರ್ಯದರ್ಶಿಗಳಾದ ಶಾಂತಮೂರ್ತಿ ಬಾವಿಕಟ್ಟಿ, ಶಂಭುಲಿಂಗಯ್ಯ ಸ್ವಾಮಿ, ವೆಂಕಟೇಶ್ ಇಲ್ಲೂರು, ಶಾರದಾಂಬ ಬ್ಯಾಂಕಿನ ಸಿಇಒ ರಾಜಕುಮಾರ್, ಆಯುರ್ವೇದಿಕ್ ಕಾಲೇಜಿನ ಉಪ ಪ್ರಾಚಾರ್ಯರಾದ ವಿಶ್ವೇಶ್ವರಯ್ಯ ಮಠ ಹಾಗೂ ಕಾಲೇಜಿನ ಸ್ವಸ್ಥವೃತ್ತ ವಿಭಾಗದ ವೈದ್ಯರಾದ ಡಾ. ಅರ್ಪಿತಾ ಉಪಸ್ಥಿತರಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಯೋಗಗುರು ಅನ್ನದಾನಯ್ಯನವರು, ತಾಲ್ಲೂಕಿನಲ್ಲಿ ಯೋಗ ಕಾರ್ಯಕ್ರಮಗಳಿಗೆ ಸದಾ ಸಹಕಾರ ನೀಡುತ್ತಾ ಬಂದಿರುವ ಎಲ್ಲಾ ಗೌರವಾನ್ವಿತ ಯೋಗ ಬಂಧುಗಳಿಗೂ, ಶಿಕ್ಷಣಾಧಿಕಾರಿಗಳಾದ ಚಂದ್ರಶೇಖರ್ ದೊಡ್ಮನಿ ಅವರಿಗೂ ಕೃತಜ್ಞತೆ ಸಲ್ಲಿಸುತ್ತಾ ಕಲ್ಮಠದ ಪೂಜ್ಯರ ಆಶೀರ್ವಾದ ನಮ್ಮ ಮೇಲೆ ಸದಾ ಇರಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ಸ್ಪರ್ಧೆಯ ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದ ಡಾ. ಪೂಜಾ, ಡಾ. ಅರ್ಪಿತಾ ಹಾಗೂ ನಿವೃತ್ತ ದೈಹಿಕ ಶಿಕ್ಷಕರಾದ ಬಸವಲಿಂಗಪ್ಪನವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಯೋಗಾಸನ ಮತ್ತು ಪ್ರಬಂಧ ಸ್ಪರ್ಧೆಗಳಲ್ಲಿ ವಿವಿಧ ಶಾಲೆಗಳಿಂದ ಆಗಮಿಸಿದ್ದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅತ್ಯಂತ ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಮಾನ್ವಿ ಪಬ್ಲಿಕ್ ಶಾಲೆಯ ಶಿಕ್ಷಕರಾದ ನರಸಿಂಹಮೂರ್ತಿ ದೇಸಾಯಿ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರೆ, ಕೊನೆಯಲ್ಲಿ ಭಾಗವಹಿಸಿದ ಎಲ್ಲಾ ಶಾಲಾ ಮಕ್ಕಳಿಗೆ ಲಯನ್ಸ್ ಕ್ಲಬ್ ವತಿಯಿಂದ ಉಚಿತವಾಗಿ ತಂಪು ಪಾನೀಯಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ಶಿಕ್ಷಕರು ಹಾಗೂ ಯೋಗಾಸಕ್ತರು ಉಪಸ್ಥಿತರಿದ್ದರು.

# ಡಿಡಿಪಿಆಯ್ ಮಲ್ಲಿಕಾರ್ಜುನ್ ರವರಿಂದ 2026 .27ನೇ ಸಾಲಿನ ಧ್ಯೇಯ ವಾಕ್ಯ ನಾಮಫಲಕ ಬಿಡುಗಡೆ.




ಧೈರ್ಯದ ದಾರಿ

**ರಾಯಚೂರು:** ತಾಲೂಕಿನ ಸರಕಾರಿ ಪ್ರೌಢಶಾಲೆ ಉಡಮಗಲ್ ಖಾನಾಪುರದಲ್ಲಿ 2026 ಮತ್ತು 27 ನೇ ಶೈಕ್ಷಣಿಕ ಸಾಲಿನ ದೇಯ.ವಾಕ್ಯ "ಉತ್ತಮ ಕಲಿಕೆ ಉಜ್ವಲ ಭವಿಷ್ಯ" ನಾಮಫಲಕವನ್ನು ರಾಯಚೂರು ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಜಿ ಮಲ್ಲಿಕಾರ್ಜುನ ಅವರು ಬಿಡುಗಡೆಗೊಳಿಸಿದರು .ಮಕ್ಕಳ ಶೈಕ್ಷಣಿಕ ವಿದ್ಯಾರ್ಥಿಗಳ ಭವಿಷ್ಯ ಚೆನ್ನಾಗಿ ಇರಬೇಕಾದರೆ ವಿದ್ಯಾರ್ಥಿಗಳ ಕಲಿಕೆ ಚೆನ್ನಾಗಿ ಆಗಬೇಕು ಶಿಕ್ಷಕರು ಉತ್ತಮವಾಗಿ ಕಲಿಸಿ ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸಿರಿ ಈ ಶಾಲೆಯ ಶಿಕ್ಷಕರಾದ ದಂಡಪ್ಪ ಬಿರಾದರವರು ಮೂರ್ನಾಲ್ಕು ವರ್ಷಗಳಿಂದಲೂ ನಾಮಪಲಕವನ್ನು ತಯಾರ ಮಾಡಿ ತಮ್ಮ ಕಡೆಯಿಂದ ಶಾಲೆಗೆ ದೇಣಿಗೆ ರೂಪ ಕೊಡುತ್ತಿರುವುದು ಮೆಚ್ಚುವಂತ ವಿಷಯ ಎಂದು ಹೇಳಿದರು. ಈ ವರ್ಷದ ಘೋಷಾವಾಕ್ಯವನ್ನು ವಿದ್ಯಾರ್ಥಿಗಳಿಂದ ಓದಿಸಿದರು ನಂತರ ಅವರ ಓದಿಕೆಯನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸಿದರು. ಎಸ್ ಎಸ್ ಎಲ್ ಸಿ ತರಗತಿ ಇನ್ನಿತರ ತರಗತಿಗಳು ಸಂದರ್ಶನ ಮಾಡಿ ವಿದ್ಯಾರ್ಥಿಗಳ ಕಲಿಕೆ ಕುರಿತು ಸಮಾಲೋಚಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯ ಗುರುಗಳಾದ ವೀರೇಶ ಅಂಗಡಿ ಶಿಕ್ಷಕ ವೃಂದದವರಾದ ನಫೀಸ್ ಅಂಜುಮ್ ವೀಣಾ ಕುಲಕರ್ಣಿ ಸಾವಿತ್ರಿ ಪದ್ಮಾವತಿ ಅನಿತಾ ಎನ್ ಪದ್ಮ. ಸರಸ್ವತಿ ಹಾಗೂ ಶಾಲಾ ಸಿಬ್ಬಂದಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು

# ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಸತ್ಯ ನಾರಾಯಣ ಶೆಟ್ಟಿ ಅವರಿಂದ ರಾಯಚೂರಿನ ವಿವಿಧ ಕಡೆ ಭೇಟಿ ಪರಿಶೀಲನೆ

ಧೈರ್ಯದ ದಾರಿ

**ರಾಯಚೂರು ಜೂನ್ 19:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಸತ್ಯ ನಾರಾಯಣ ಶೆಟ್ಟಿ ಅವರು ಜೂನ್ 18ರ ಗುರುವಾರ ದಂದು ರಾಯಚೂರಿ ರಿಮ್ಸ್ ಆಸ್ಪತ್ರೆ, ಸಖಿ ಓನ್ ಸ್ಟಾಫ್ ಸೆಂಟರ್, ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಪಶೀಲನೆ ಮಾಡಿದರು.

ಮೊದಲು ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ, ಅಪೌಷ್ಟಿಕ ಮಕ್ಕಳ ಆರೋಗ್ಯ ವಿಚಾರಿಸಿ ಪಾಲಕರೊಂದಿಗೆ ಸಮಾಲೋಚಿಸಿದರು. ನಂತರ ರಿಮ್ಸ್ ಆಸ್ಪತ್ರೆಯ ಆವರಣದಲ್ಲಿರುವ ಸಖಿ ಓನ್ ಸ್ಟಾಫ್ ಸೆಂಟರ್‌ಗೆ ಭೇಟಿ ನೀಡಿ, ಮಕ್ಕಳ ಪ್ರಕರಣಗಳ ಕುರಿತು ಸಿಬ್ಬಂದಿಗಳ ಕಾರ್ಯನಿರ್ವಹಣೆ ಮತ್ತು ಇತರೆ ಇಲಾಖೆಗಳ ಸಮನ್ವಯದೊಂದಿಗೆ ಕ್ರಮಕೈಗೊಳ್ಳಲು ಸಲಹೆ ನೀಡಿದರು.

ನಂತರ ರಾಯಚೂರಿನ ಆಗಾಫೆ ಚರ್ಚ್ ಹತ್ತಿರವಿರುವ ಮಕ್ಕಳ ಪಾಲನಾ ಸರ್ಕಾರಿ ಸಂಸ್ಥೆಗಳಿಗೆ ಭೇಟಿ ಮಾಡಿ ಮಕ್ಕಳೊಂದಿಗೆ ಸಮಾಲೋಚಿಸಿ, ಅಧಿಕಾರಿ ಮತ್ತು ಸಿಬ್ಬಂದಿಗಳೊಂದಿಗೆ ಸಭೆ



ನಡೆಸಿದರು. ಇದೇ ಸಂಧರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಂ.ಡಿ.ಗೋಕುಲ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ, ಗಿಲ್ಲೇಸೂಗೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮನ್ಸೂರ್ ಅಹ್ಮದ್ ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಕಲ್ಯಾಣ ಸಮಿತಿಯ ಅಧೀಕ್ಷಕರು, ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ಕನಿಷ್ಟ ವೇತನ ಜಾರಿಗೆ ಒತ್ತಾಯಿಸಿ ಧರಣಿ ಸತ್ಯಾಗ್ರಹ



**ಕಲಬುರಗಿ,ಜೂ.19–**ಕನಿಷ್ಟ ವೇತನ ಜಾರಿಗಾಗಿ, ಬಾಕಿ ವೇತನಕ್ಕಾಗಿ, ವಾರದ ರಜೆ ಕಡ್ಡಾಯವಾಗಿ ಕೊಡಲು ಒತ್ತಾಯಿಸಿ ಕರ್ನಾಟಕ ರಾಜ್ಯ ಸರಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಜಿಲ್ಲಾ ಪಂಚಾಯತ ಕಚೇರಿ ಮುಂದೆ ಇಂದು ಧರಣಿ ಸತ್ಯಾಗ್ರಹ ನಡೆಸಲಾಯಿತು.

ಸಮಾಜ ಕಲ್ಯಾಣ ಇಲಾಖೆ: ಕ್ರೈಸ್ತ್ ಇಲಾಖೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವಸತಿ ನಿಲಯಗಳಲ್ಲಿ ದುಡಿಯುತ್ತಿರುವ ಹೊರಗುತ್ತಿಗೆ ನೌಕರರಿಗೆ ಸರಕಾರ ನಿಗದಿ ಪಡಿಸಿದ ಕನಿಷ್ಟ ವೇತನ 2026 ಏಪ್ರಿಲ್ 1 ರಿಂದಲೇ ಜಾರಿ ಮಾಡಬೇಕು, ಸಮಾಜ ಕಲ್ಯಾಣ ಇಲಾಖೆಯಲ್ಲಿ ಬಾಕಿ ಇರುವ 34 ತಿಂಗಳಿಂದ ವೇತನ ಕೂಡಲೇ ಪಾವತಿಸಬೇಕು, ವಾರಕ್ಕೊಂದು ರಜೆ ಕೂಡಲೇ ಜಾರಿ ಮಾಡಬೇಕು, ಹೊಸದಾಗಿ ಪ್ರಾರಂಭಿಸುವ ವಸತಿ ನಿಲಯಗಳಲ್ಲಿ ಈ ಹಿಂದೆ ಸೇವೆ ಸಲ್ಲಿಸಿರುವ ನೌಕರರಿಗೆ ಪುನ: ಕೆಲಸಕ್ಕೆ ತೆಗೆದುಕೊಳ್ಳಬೇಕು, ವೇತನ ಹೆಚ್ಚಳವಾಗಿದ್ದರಿಂದ ನೌಕರರ ಮೇಲೆ ಕಿರುಕುಳ ಸುಳ್ಳು ಆರೋಪ ಹೊರಿಸಿ ಕೆಲಸದಿಂದ ತೆಗೆಯುತ್ತಿರುವ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಜರುಗಿಸಬೇಕು ಎಂದು ಆಗ್ರಹಿಸಲಾಯಿತು.

ಸಂಘದ ರಾಜ್ಯಾಧ್ಯಕ್ಷ ಭೀಮಶೆಟ್ಟಿ ಯಂಪಳ್ಳಿ, ಜಿಲ್ಲಾ ಕಾರ್ಯದರ್ಶಿ ಮಹ್ಮದ್ ಜಮಿರೋದ್ದಿನ್ ಬಾಬಾ, ಉಪಾಧ್ಯಕ್ಷ ಮೇಘರಾಜ ಕಠಾರೆ, ಎಐಎಡಬ್ಲ್ಯೂಯು ಜಿಲ್ಲಾ ಕಾರ್ಯದರ್ಶಿ ಮಲ್ಲಮ್ಮ ಕೋಡ್ಲಿ, ಜಿಲ್ಲಾಧ್ಯಕ್ಷ ಕಲ್ಯಾಣಿ ಪೂಜಾರಿ, ಸಹ ಕಾರ್ಯದರ್ಶಿ ಪರಶುರಾಮ ಹಡಲಗಿ, ನರಸಮ್ಮ ಕೊಂಡಂಪಳ್ಳಿ, ಬಾಬು ಹೊಸಮನಿ, ಮಾಪಣ್ಣ, ನರಸಮ್ಮ ಚಂದನಕೇರಾ, ಶಿವರಾಜ ಆಡಕಿ, ನಾಗರಾಜ ಕಟ್ಟಿಮನಿ, ನಾಗರತ್ನ ಮದನಕರ, ಅಲ್ಲಾ ಪಟೇಲ್ ವಾಡಿ, ಲಕ್ಷ್ಮೀಪುತ್ರ ಸೇರಿದಂತೆ ಮತ್ತಿತರರು ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.

# ಯಡ್ರಾಮಿ ಠಾಣೆ ಪಿಎಸ್ಐ ವಿಶ್ವನಾಥ ಮುದರೆಡ್ಡಿ, ಸಿಬ್ಬಂದಿ ಸಿದ್ದಣ್ಣ ಬಿರಾದಾರ ಲೋಕಾಯುಕ್ತ ಬಲೆಗೆ



**ಯಡ್ರಾಮಿ,ಜೂ.19–**ಲಂಚದ ಸ್ವೀಕರಿಸುತ್ತಿದ್ದ ಯಡ್ರಾಮಿ ಠಾಣೆ ಪಿಎಸ್ಐ ವಿಶ್ವನಾಥ ಮುದರೆಡ್ಡಿ ಹಾಗೂ ಎಸ್‌ಬಿ ಸಿಬ್ಬಂದಿ ಸಿದ್ದಣ್ಣ ಬಿರಾದಾರ ಅವರು ಲೋಕಾಯುಕ್ತರ ಬಲೆಗೆ ಬಿದ್ದ ಘಟನೆ ಯಡ್ರಾಮಿ ಪೊಲೀಸ್ ಠಾಣೆ ಆವರಣದಲ್ಲಿ ಗುರುವಾರ ರಾತ್ರಿ ನಡೆದಿದೆ.

ಅಕ್ಕಿ ವ್ಯಾಪಾರಕ್ಕೆ ಸಂಬಂಧಿಸಿದಂತೆ ಸಹಕಾರ ನೀಡುವುದಾಗಿ ಆನಂದ್ ಕುಸ್ತಿ ಎಂಬುವವರಿಗೆ ಹಣದ ಬೇಡಿಕೆ ಇಟ್ಟಿದ್ದರು. ಆಗ ಕಳೆದ 12ರಂದು ಫೋನ್ ಪೇ ಮೂಲಕ 20,000ರೂ.ಗಳನ್ನು ಪಡೆದಿದ್ದರು. ಮತ್ತೆ 30,000ರೂ.ಗಳಿಗೆ ಬೇಡಿಕೆ ಇಟ್ಟಿದ್ದು ಅದರಲ್ಲಿ 20,000ರೂ.ಗಳನ್ನು ಯಡ್ರಾಮಿ ಪೊಲೀಸ್ ಠಾಣೆಯ ಆವರಣದಲ್ಲಿ ಗುರುವಾರ ರಾತ್ರಿ ಪಡೆಯುವಾಗ ಲೋಕಾಯುಕ್ತರು ದಾಳಿ ಮಾಡಿ ಇಬ್ಬರನ್ನೂ ಬಂಧಿಸಿದರು.

ಲೋಕಾಯುಕ್ತ ಎಸ್‌ಪಿ ಸಿದ್ದರಾಜು ಅವರ ಮಾರ್ಗದರ್ಶನದಲ್ಲಿ ಇನ್‌ಸ್ಪೆಕ್ಟರ್ ಅರುಣ್ ಮರಗುಂಡಿ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸಿಬ್ಬಂದಿ ಮಲ್ಲಿನಾಥ, ರಾನೋಜಿ ಬಸವರಾಜ್ ಅವರೂ ಸೇರಿದಂತೆ ಇತರ ಅಧಿಕಾರಿಗಳು ಭಾಗವಹಿಸಿದ್ದರು.

ವಿಚಿತ್ರ ಸಂಗತಿಯೆಂದರೆ, ಗಂಭೀರ ಪ್ರಕರಣಗಳಲ್ಲಿ ಹಾಗೂ ಆರೋಪಿಗಳ ಬಂಧನದಲ್ಲಿ ತೋರಿದ ಕಾರ್ಯಕ್ಷಮತೆಗಾಗಿ ಪಿಎಸ್ಐ ವಿಶ್ವನಾಥ ಮುದರೆಡ್ಡಿ ಅವರು 2024–25ನೇ ಸಾಲಿನಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಚಿನ್ನದ ಪದಕವನ್ನು ಪಡೆದಿದ್ದರು.

ಬಂಧಿತ ಆರೋಪಿಗಳನ್ನು ನಗರದ ಐವಾನ್ ಶಾಹಿ ಅತಿಥಿಗೃಹದ ಆವರಣದಲ್ಲಿ ಇರುವ ಲೋಕಾಯುಕ್ತರ ಕಚೇರಿಗೆ ಕರೆತಂದು ಹೆಚ್ಚಿನ ವಿಚಾರಣೆಗೆ ಒಳಪಡಿಸಿದ್ದಾರೆ ಎಂದು ಅಧಿಕೃತ ಮೂಲಗಳು ಹೇಳಿವೆ.

# ಗುಂಡಿಕ್ಕಿ ರೌಡಿ ಶೀಟರ್ ಬಂಧನ

**ಬೆಂಗಳೂರು,ಜೂ.11–**ದರೋಡೆ,ಕೊಲೆಯತ್ನ,ಬೆದರಿಕೆ,ಸುಲಿಗೆ ಸೇರಿ ಗಂಭೀರ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿದ್ದ ಕುಖ್ಯಾತ ರೌಡಿ ಜೀವನಿಗೆ ಹೆಬ್ಬಗೋಡಿ ಪೊಲೀಸರು ಗುಂಡು ಹೊಡೆದು ಬಂಧಿಸಿದ್ದಾರೆ.ಕಾಲಿಗೆ ಪೊಲೀಸರ ಗುಂಡೇಟು ತಗುಲಿ ಗಾಯಗೊಂಡಿರುವ ರೌಡಿ ಜೀವ (19)ನನ್ನು ಬಂಧಿಸಿ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಕಳೆದ ವಾರ ಹೆಬ್ಬಗೋಡಿ ಹಾಗೂ ಎಲೆಕ್ಟ್ರಾನಿಕ್ ಸಿಟಿ ಭಾಗದಲ್ಲಿ ದರೋಡೆ ಮಾಡಿದ್ದ ಪರಾರಿಯಾಗಿದ್ದ ರೌಡಿ ಜೀವನ ಪತ್ತೆಗೆ ಹೆಬ್ಬಗೋಡಿ ಪೊಲೀಸರು ವಿಶೇಷ ತಂಡ ರಚಿಸಿಕೊಂಡು ಶೋಧ ನಡೆಸಿದ್ದರು.ರೌಡಿ ಜೀವ ಇಂದು ನಸುಕಿನಲ್ಲಿ ಸಿಂಗೇನಾ ಅಗ್ರಹಾರದ ತೋಪಿನಲ್ಲಿ ಅಡಗಿರುವ ಖಚಿತವಾದ ಮಾಹಿತಿ ಕಲೆಹಾಕಿ ಕಾರ್ಯಾಚರಣೆಯನ್ನು ಹೆಬ್ಬಗೋಡಿ ಪೊಲೀಸರು ಕೈಗೊಂಡಿದ್ದಾರೆ.

ಪೊಲೀಸ್ ವಾಹನವನ್ನು ಕಂಡ ರೌಡಿ ಜೀವ ಓಡಿ ಹೋದಾಗ ಬೆನ್ನಟ್ಟಿ ಪೊಲೀಸ್ ಸಿಬ್ಬಂದಿ ನಾಗೇಶ್ ಹೋದಾಗ ಅವರ ಮೇಲೆ ಮಾರಕಾಸ್ತ್ರಗಳಿಂದ ದಾಳಿಗೆ ಮುಂದಾಗಿದ್ದಾನೆ.


ಮಾರಕಾಸ್ತ್ರ ಬಿಟ್ಟು ಶರಣಾಗುವಂತೆ ಸೂಚನೆ ನೀಡಿದರೂ ಮತ್ತೆ ಹಲ್ಲೆಗೆ ಮುಂದಾಗಿ ಪರಾರಿಯಾಗಲು ಯತ್ನಿಸಿದಾಗ ಸಬ್ ಇನ್‌ಸ್ಪೆಕ್ಟರ್ ಅಯ್ಯಪ್ಪ ಅವರು ಆತ್ಮರಕ್ಷಣೆಗೆ ಹಾರಿಸಿದ ಗುಂಡು ಕಾಲಿಗೆ ತಗುಲಿ ಜೀವ ಸ್ಥಳದಲ್ಲಿಯೇ ಕುಸಿದು ಬಿದ್ದಿದ್ದಾನೆ.

ಕೂಡಲೇ ಆತನನ್ನು ಬಂಧಿಸಿರುವ ಹೆಬ್ಬಗೋಡಿ ಪೊಲೀಸರು ಆತನನ್ನು ಹಾಗೂ ಪೊಲೀಸ್ ಸಿಬ್ಬಂದಿ ನಾಗೇಶ್ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಹೆಬ್ಬಗೋಡಿ ಪೊಲೀಸ್ ಠಾಣೆಯ ರೌಡಿ ಪಟ್ಟಿಯಲ್ಲಿರುವ ರೌಡಿ ಜೀವ ತಿರುಪಾಳ್ಯದಲ್ಲಿ ವಾಸವಾಗಿದ್ದು,ಕೊಲೆ, ಸುಲಿಗೆ, ದರೋಡೆ ಸೇರಿ ಹಲವು ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿ ಪೊಲೀಸರಿಗೆ ಸವಾಲಾಗಿ ಪರಿಣಮಿಸಿದ್ದನು. ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

# ಟೆಲಿಗ್ರಾಂ ನಿರ್ಬಂಧ ಮುಂದುವರಿಕೆ

**ನವದೆಹಲಿ, ಜೂ.19–** ದೇಶಾದ್ಯಂತ ತೀವ್ರ ಸಂಚಲನ ಸೃಷ್ಟಿಸಿರುವ 'ನೀಟ್–ಯುಜಿ' ಪರೀಕ್ಷಾ ಅಕ್ರಮಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ವಿಧಿಸಿದ್ದ ಟೆಲಿಗ್ರಾಂ ಆಪ್ ಮೇಲಿನ ತಾತ್ಕಾಲಿಕ ನಿರ್ಬಂಧವನ್ನು ದೆಹಲಿ ಹೈಕೋರ್ಟ್ ಇಂದು ಎತ್ತಿಹಿಡಿದಿದೆ.



ಪರೀಕ್ಷಾ ಅಕ್ರಮಗಳನ್ನು ತಡೆಯಲು ಮತ್ತು ಪರೀಕ್ಷೆಯ ಪಾವಿತ್ರ್ಯತೆಯನ್ನು ಕಾಪಾಡಲು ಸರ್ಕಾರ ಕೈಗೊಂಡಿರುವ ಈ ಕ್ರಮವು ಸೂಕ್ತವಾಗಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಮಾಹಿತಿ ತಂತ್ರಜ್ಞಾನ ಕಾಯ್ದೆ 2000 ರ ಸೆಕ್ಷನ್ 69ಎ ಅಡಿಯಲ್ಲಿ ಕೇಂದ್ರ ಸರ್ಕಾರ ಹೊರಡಿಸಿದ್ದ ನಿಷೇಧಾಜ್ಞೆಯನ್ನು ಪ್ರಶ್ನಿಸಿ ಟೆಲಿಗ್ರಾಂ ಸಂಸ್ಥೆ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ತೇಜಸ್ ಕರಿಯಾ ಅವರ ಪೀಠವು ವಜಾಗೊಳಿಸಿದೆ. "ಸರ್ಕಾರದ ಕ್ರಮಗಳು ಅತಿ ಕಡಿಮೆ ನಿರ್ಬಂಧದಾಯಕವಾಗಿದ್ದು, ಇದನ್ನು ಅಸಮಾನ ಅಥವಾ ಅತಿರೇಕದ ಕ್ರಮ ಎಂದು ಹೇಳಲು ಸಾಧ್ಯವಿಲ್ಲ" ಎಂದು ಕೋರ್ಟ್ ಸ್ಪಷ್ಟಪಡಿಸಿದೆ.

ಮೇ 3 ರಂದು ನಡೆದಿದ್ದ ಮೂಲ ನೀಟ್–ಯುಜಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಅಕ್ರಮಗಳ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿತ್ತು. ಸದ್ಯ ಈ ಪ್ರಕರಣದ ತನಿಖೆಯನ್ನು ಸಿಬಿಐ ನಡೆಸುತ್ತಿದೆ. ಈ ಮಧ್ಯೆ, ಜೂನ್ 22 ರಂದು ಮರುಪರೀಕ್ಷೆ ನಿಗದಿಯಾಗಿದ್ದು, ಸಂಘಟಿತ ನಕಲು ದಂಧೆಕೋರರು ಅಭ್ಯರ್ಥಿಗಳನ್ನು ವಂಚಿಸಲು ಮತ್ತು ಪ್ರಶ್ನೆಪತ್ರಿಕೆ ಹಂಚಿಕೊಳ್ಳಲು ಟೆಲಿಗ್ರಾಂ ವೇದಿಕೆಯನ್ನು ಬಳಸಿಕೊಳ್ಳಬಹುದು ಎಂಬ ಆತಂಕವಿತ್ತು. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಶಿಫಾರಸಿನ ಮೇರೆಗೆ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಜೂನ್ 22 ರವರೆಗೆ ಭಾರತದಲ್ಲಿ ಟೆಲಿಗ್ರಾಂ ಪ್ರವೇಶವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿದೆ. ಅಷ್ಟೇ ಅಲ್ಲದೆ, ಈ ಹಿಂದೆ ಪೋಸ್ಟ್ ಮಾಡಲಾದ ಸಂದೇಶಗಳನ್ನು ಎಡಿಟ್ ಮಾಡುವ ಸೌಲಭ್ಯವನ್ನು ಜೂನ್ 30 ರವರೆಗೆ ಸ್ಥಗಿತಗೊಳಿಸುವಂತೆ ಸೂಚಿಸಿದೆ.

ಟೆಲಿಗ್ರಾಂ ವಾದವೇನು?

ಸರ್ಕಾರದ ಈ ಕ್ರಮವನ್ನು ಪ್ರಶ್ನಿಸಿದ್ದ ಟೆಲಿಗ್ರಾಂ ಪರ ಹಿರಿಯ ವಕೀಲ ಧ್ರುವ್ ಮೆಹ್ತಾ, "ಇತರ ಸಾಮಾಜಿಕ ಮಾಧ್ಯಮಗಳನ್ನು ಮುಕ್ತವಾಗಿಟ್ಟು, ಕೇವಲ ಟೆಲಿಗ್ರಾಂ ಅನ್ನು ಮಾತ್ರ ಗುರಿಯಾಗಿಸಿಕೊಂಡಿರುವುದು ಸಂವಿಧಾನದ ವಿಧಿ 14 ರ ಉಲ್ಲಂಘನೆಯಾಗಿದೆ. ಸರ್ಕಾರ ನೀಡಿದ ಲಿಂಕ್‌ಗಳನ್ನು ಒಂದು ಗಂಟೆಯೊಳಗೆ ತೆಗೆದುಹಾಕಿದ್ದೇವೆ ಮತ್ತು ನೀಟ್ ಅಕ್ರಮಕ್ಕೆ ಸಂಬಂಧಿಸಿದ 900 ಕ್ಕೂ ಹೆಚ್ಚು ಲಿಂಕ್‌ಗಳನ್ನು ಈಗಾಗಲೇ ಬ್ಲಾಕ್ ಮಾಡಲಾಗಿದೆ. ಹೀಗಿದ್ದೂ ಪರೀಕ್ಷಾ ಅಕ್ರಮವನ್ನು ದೇಶದ ಸಾರ್ವಭೌಮತೆ ಮತ್ತು ಸಮಗ್ರತೆಗೆ ಧಕ್ಕೆ ತರುವ ವಿಷಯ ಎಂದು ಬಿಂಬಿಸಿ ಆಪ್ ನಿಷೇಧಿಸಿರುವುದು ಸರ್ಕಾರದ ವಿವೇಚನಾ ರಹಿತ ನಿರ್ಧಾರ" ಎಂದು ವಾದಿಸಿದ್ದರು.

ಸರ್ಕಾರದ ಸಮರ್ಥನೆ

ಕೇಂದ್ರ ಸರ್ಕಾರದ ಪರವಾಗಿ ವಾದ ಮಂಡಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಮತ್ತೊಮ್ಮೆ ಪ್ರಶ್ನೆಪತ್ರಿಕೆ ಸೋರಿಕೆಯಾಗುವುದನ್ನು ತಡೆಯಲು ಲಭ್ಯವಿರುವ ಅತ್ಯಂತ ಸೂಕ್ತ ಹಾಗೂ ಸೀಮಿತ ಕ್ರಮವನ್ನು ಸರ್ಕಾರ ಕೈಗೊಂಡಿದೆ ಎಂದು ಸಮರ್ಥಿಸಿಕೊಂಡರು. ಟೆಲಿಗ್ರಾಂನ ವಿಶಿಷ್ಟ ಸಾಫ್ಟ್‌ವೇರ್ ವಿನ್ಯಾಸ ಮತ್ತು ಗೌಪ್ಯತಾ ನಿಯಮಗಳಿಂದಾಗಿ ತನಿಖಾ ಸಂಸ್ಥೆಗಳಿಗೆ ತಕ್ಷಣದ ಹಸ್ತಕ್ಷೇಪ ಕಷ್ಟಸಾಧ್ಯ. ಖಾತೆಯನ್ನು ಡಿಲೀಟ್ ಮಾಡಿದರೆ ಅದರಲ್ಲಿರುವ ಡೇಟಾ, ಸಂದೇಶಗಳೂ ಸಂಪೂರ್ಣವಾಗಿ ಅಳಿಸಿಹೋಗುವುದರಿಂದ ಸಾಕ್ಷ್ಯ ನಾಶವಾಗುವ ಸಾಧ್ಯತೆ ಹೆಚ್ಚು ಎಂದು ಅವರು ಕೋರ್ಟ್‌ಗೆ ಮನವರಿಕೆ ಮಾಡಿಕೊಟ್ಟರು. ಉಭಯ ಪಕ್ಷಗಳ ವಾದ ಆಲಿಸಿದ ನ್ಯಾಯಾಲಯವು ಸರ್ಕಾರದ ಕ್ರಮದಲ್ಲಿ ಯಾವುದೇ ದೋಷವಿಲ್ಲ ಎಂದು ತೀರ್ಪು ನೀಡಿದೆ.

# ಸಣ್ಣ ವ್ಯಾಪಾರಿಗಳ ರಕ್ಷಣೆಗೆ ಸೂಕ್ತ ನೀತಿ ರೂಪಿಸುವ ಅಗತ್ಯ:ಮನೋಹರ್ ಅಗರವಾಲ್



**ಕಲಬುರಗಿ,ಜೂ.19–**ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ), ಕಲಬುರಗಿ, ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ) ಹಾಗೂ ಸ್ವದೇಶಿ ಜಾಗರಣ ಮಂಚ್ ಸಂಯುಕ್ತ ಆಶ್ರಯದಲ್ಲಿ "ವ್ಯಾಪಾರಿ ಸಂವಾದ" ಕಾರ್ಯಕ್ರಮವನ್ನು ಕೆಕೆಸಿಸಿಐ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಕೆಕೆಸಿಸಿಐ ಗೌರವ ಕಾರ್ಯದರ್ಶಿ ಶಿವರಾಜ್ ವಿ. ಇಂಗಿನಶೆಟ್ಟಿ ಅವರು ಸ್ವಾಗತಿಸಿ, ಅತಿಥಿಗಳನ್ನು ಹಾಗೂ ವಿವಿಧ ವ್ಯಾಪಾರ ಸಂಘಗಳ ಪದಾಧಿಕಾರಿಗಳು, ಉದ್ಯಮಿಗಳು ಮತ್ತು ಸದಸ್ಯರನ್ನು ಬರಮಾಡಿಕೊಂಡರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಸ್ವದೇಶಿ ವ್ಯಾಪಾರಿ ಮಂಚ್ ರಾಷ್ಟ್ರೀಯ ಸಹ ಸಂಯೋಜಕ ಮನೋಹರ್ ಅಗರವಾಲ್ ಅವರು ಮಾತನಾಡಿ, ಇ–ಕಾಮರ್ಸ್ ಹಾಗೂ ಕ್ವಿಕ್ ಕಾಮರ್ಸ್ ಕಂಪನಿಗಳಿಂದ ದೇಶದ ಸಾಂಪ್ರದಾಯಿಕ ವ್ಯಾಪಾರಿಗಳು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ ಎಂದು ಹೇಳಿದರು. ದೇಶದ ಆರ್ಥಿಕತೆ ಹಾಗೂ ಉದ್ಯೋಗ ಸೃಷ್ಟಿಯ ಬೆನ್ನೆಲುಬಾಗಿರುವ ಸಣ್ಣ ವ್ಯಾಪಾರಿಗಳು ಇಂದಿನ ನೀತಿಗಳಿಂದ ಹಿನ್ನಡೆ ಅನುಭವಿಸುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ವ್ಯಾಪಾರ ಕುಟುಂಬಗಳ ಮುಂದಿನ ಪೀಳಿಗೆಯವರು ಕುಟುಂಬದ ವ್ಯಾಪಾರ ಮುಂದುವರಿಸುವ ಬದಲು ಉದ್ಯೋಗಗಳತ್ತ ಮುಖ ಮಾಡುತ್ತಿರುವುದು ಚಿಂತಾಜನಕ ಬೆಳವಣಿಗೆಯಾಗಿದೆ. ಪೋಷಕರು ತಮ್ಮ ಮಕ್ಕಳಿಗೆ ವ್ಯಾಪಾರದ ಬಗ್ಗೆ ಸಕಾರಾತ್ಮಕವಾಗಿ ಮಾತನಾಡಿ, ಅವರನ್ನು ವ್ಯಾಪಾರ ಕ್ಷೇತ್ರಕ್ಕೆ ಪ್ರೋತ್ಸಾಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಅವರು ಸೂರತ್‌ನ ಖ್ಯಾತ ಉದ್ಯಮಿ ಸವ್ಜಿ ಭಾಯಿ ಧೋಳಕಿಯಾ ಅವರ ಉದಾಹರಣೆ ನೀಡಿ, ಕೇವಲ 12.50 ಹಣದೊಂದಿಗೆ ಜೀವನ ಆರಂಭಿಸಿ ಇಂದು ಹರಿಕೃಷ್ಣ ಡೈಮಂಡ್ಸ್ ಸಂಸ್ಥೆಯನ್ನು ಜಾಗತಿಕ ಮಟ್ಟಕ್ಕೆ ಬೆಳೆಸಿದ್ದಾರೆ ಎಂದು ಹೇಳಿದರು. ತಮ್ಮ ಮಗನನ್ನು ಕೇರಳಕ್ಕೆ ಕಳುಹಿಸಿ ಸಾಮಾನ್ಯ ಜನರು ಹಾಗೂ ವ್ಯಾಪಾರಿಗಳು ಎದುರಿಸುವ ಕಷ್ಟಗಳನ್ನು ಅರಿಯುವಂತೆ ಮಾಡಿದ ಘಟನೆಯನ್ನು ಉಲ್ಲೇಖಿಸಿದರು.

ಅದೇ ರೀತಿ ನಿರ್ಮಾ ಸಂಸ್ಥಾಪಕ ಕರ್ಸಭಾಯಿ ಪಟೇಲ್ ಅವರ ಯಶೋಗಾಥೆಯನ್ನು ವಿವರಿಸಿದ ಅವರು, ಗುಣಮಟ್ಟ ಹಾಗೂ ಜನರ ನಂಬಿಕೆಯ ಮೂಲಕ ಒಂದು ಬ್ರ್ಯಾಂಡ್‌ನ್ನು ಹೇಗೆ ಬೆಳೆಸಬಹುದು ಎಂಬುದನ್ನು ತಿಳಿಸಿದರು.

ಕಾಲಾನುಗುಣವಾಗಿ ಬದಲಾಗುವ ತಂತ್ರಜ್ಞಾನ, ಗ್ರಾಹಕರ ಮನೋಭಾವ ಹಾಗೂ ಸರ್ಕಾರಿ ನೀತಿಗಳಿಗೆ ಅನುಗುಣವಾಗಿ ವ್ಯಾಪಾರಿಗಳು ತಮ್ಮನ್ನು ತಾವು ಬದಲಿಸಿಕೊಳ್ಳಬೇಕು. ಆಗ ಮಾತ್ರ ವ್ಯಾಪಾರ ಕ್ಷೇತ್ರದಲ್ಲಿ ಉಳಿಯಲು ಮತ್ತು ಬೆಳೆಯಲು ಸಾಧ್ಯ ಎಂದು ಹೇಳಿದರು.

ಸ್ವದೇಶಿ ವ್ಯಾಪಾರಿ ಮಂದಿನೊಂದಿಗೆ ವಿವಿಧ ವ್ಯಾಪಾರ ಸಂಘಗಳು ಕೈಜೋಡಿಸುವಂತೆ ಆಹ್ವಾನಿಸಿದ ಅವರು, ಸ್ಥಳೀಯ ಮಟ್ಟದಲ್ಲಿ ವ್ಯಾಪಾರಿಗಳು ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ನೀತಿ ಸಂಬಂಧಿತ ವಿಚಾರಗಳನ್ನು ಒಗ್ಗಟ್ಟಿನಿಂದ ಸರ್ಕಾರದ ಗಮನಕ್ಕೆ ತರಲು ಸಾಧ್ಯವಾಗುತ್ತದೆ ಎಂದರು.

ಚರ್ಚೆಯಲ್ಲಿ ಭಾಗವಹಿಸಿದ ಧಾನ್ಯ ಮತ್ತು ಬೀಜ ವ್ಯಾಪಾರಿಗಳ ಸಂಘದ ಅಧ್ಯಕ್ಷ ಸಂತೋಷ್ ಲಂಗರ್ ಮಾತನಾಡಿ, "ಖಾನಾ ವಿದೇಶಿ, ಪಹೇನಾ ಸ್ವದೇಶಿ" ಎಂಬ ಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು. ಆಹಾರ ಧಾನ್ಯಗಳು ಹಾಗೂ ಕೃಷಿ ಉತ್ಪನ್ನಗಳ ಆಮದು ಹೆಚ್ಚುತ್ತಿರುವುದರಿಂದ ರೈತರು ಮತ್ತು ವ್ಯಾಪಾರಿಗಳಿಗೆ ತೊಂದರೆಯಾಗುತ್ತಿದ್ದು, ಮಾರುಕಟ್ಟೆ ಬೆಲೆಗಳು ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಗಿಂತ ಕೆಳಮಟ್ಟಕ್ಕೆ ಇಳಿಯುತ್ತಿವೆ ಎಂದು ತಿಳಿಸಿದರು.

ಭಾರತದಲ್ಲೇ ಉತ್ಪಾದನೆಯಾಗುವ ಕೃಷಿ ಉತ್ಪನ್ನಗಳ ಆಮದನ್ನು ನಿಯಂತ್ರಿಸುವಂತಹ ನೀತಿಗಳನ್ನು ಜಾರಿಗೊಳಿಸಬೇಕೆಂದು ಅವರು ಸರ್ಕಾರವನ್ನು ಆಗ್ರಹಿಸಿದರು.

ಸಭೆಯಲ್ಲಿ ಇ–ಕಾಮರ್ಸ್, ಕ್ವಿಕ್ ಕಾಮರ್ಸ್, ಕೃಷಿ, ಆಮದು ನೀತಿಗಳು, ಸಣ್ಣ ವ್ಯಾಪಾರಿಗಳ ಸಮಸ್ಯೆಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು. ಚರ್ಚೆಯಲ್ಲಿ ವ್ಯಕ್ತವಾದ ಅಭಿಪ್ರಾಯಗಳು ಹಾಗೂ ಸಮಸ್ಯೆಗಳ ಕುರಿತು ಸವಿಸ್ತಾರ ಮನವಿಯನ್ನು ಸ್ವದೇಶಿ ವ್ಯಾಪಾರಿ ಮಂಚ್ ಮೂಲಕ ಸರ್ಕಾರದ ಗಮನಕ್ಕೆ ತರಲು ತೀರ್ಮಾನಿಸಲಾಯಿತು.

ಕೊನೆಯಲ್ಲಿ ವಂದನಾರ್ಪಣೆ ಸಲ್ಲಿಸಿದ ಕೆಕೆಸಿಸಿಐ ಗೌರವ ಕಾರ್ಯದರ್ಶಿ ಶಿವರಾಜ್ ವಿ. ಇಂಗಿನಶೆಟ್ಟಿ ಅವರು, ಸ್ಥಳೀಯ ವ್ಯಾಪಾರಿಗಳು, ವಿತರಕರು ಹಾಗೂ ಚಿಲ್ಲರೆ ಅಂಗಡಿಗಳನ್ನು ರಕ್ಷಿಸುವಂತಹ ನೀತಿಗಳ ಅಗತ್ಯವಿದೆ ಎಂದು ಹೇಳಿದರು. ಇ–ಕಾಮರ್ಸ್ ಹಾಗೂ ಕ್ವಿಕ್ ಕಾಮರ್ಸ್ ಕಂಪನಿಗಳು ಸ್ಥಳೀಯ ವಿತರಕರಿಂದಲೇ ಸರಕುಗಳನ್ನು ಖರೀದಿಸುವ ವ್ಯವಸ್ಥೆ ಜಾರಿಯಾಗಬೇಕು. ಇದರಿಂದ ಸ್ಥಳೀಯ ಆರ್ಥಿಕ ವ್ಯವಸ್ಥೆ ಬಲಗೊಳ್ಳುತ್ತದೆ ಹಾಗೂ ಸಣ್ಣ ವ್ಯಾಪಾರಿಗಳಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೆಕೆಸಿಸಿಐ ಉಪಾಧ್ಯಕ್ಷ ಕೇದಾರ ರಘೋಜಿ, ವ್ಯಾಪಾರ ಮತ್ತು ವ್ಯಾಪಾರ ಅದಾಲತ್ ಸಮಿತಿ ಅಧ್ಯಕ್ಷ ರಾಜಶೇಖರ ದುಕಂದಾರ್ ಹಾಗೂ ಕೇಂದ್ರ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಬಸವರಾಜ ಎಂ.ಎಸ್. ಅಧ್ಯಕ್ಷ ಮಂಡಳಿಯಲ್ಲಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ದಾಲ್ ಮಿಲ್ ಅಸೋಸಿಯೇಷನ್ ಅಧ್ಯಕ್ಷ ಚಂದ್ರಕಾಂತ್ ಕೋಬಾಳ್, ಉಪಾಧ್ಯಕ್ಷ ವಿಷುದಾಸ್ ತಾಪಾಡಿಯಾ, ಅಕ್ಕಿ ಮತ್ತು ಕಿರಾಣಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ರವೀಂದ್ರ ಮಡಂಶೆಟ್ಟಿ, ಕಪನೂರ ಕೈಗಾರಿಕಾ ಸಂಘದ ಅಧ್ಯಕ್ಷ ರವೀಂದ್ರ ಮುಕ್ಕಾ, ಧಾನ್ಯ ಮತ್ತು ಬೀಜ ವ್ಯಾಪಾರಿಗಳ ಸಂಘದ ಅಧ್ಯಕ್ಷ ಸಂತೋಷ್ ಲಂಗರ್, ಶಿವಕುಮಾರ ಬೆಳ್ಳಿ, ಆನಂದ ಚಿಂಚೂರಿ, ಬಸವರಾಜ ಸೋಮನಮರಡಿ, ಕೆಕೆಸಿಸಿಐ ಸದಸ್ಯರಾದ ರವಿಶಂಕರ್ ಜಮಧಾರಖಾನಿ ಅಭಿಜಿತ್ ಪಡಶೆಟ್ಟಿ, ರಾಹುಲ್ ತೆಂಗ್ಲಿ, ಜಗದೀಶ್ ಪಾಟೀಲ್, ಸಂದೀಪ್ ಮಿಶ್ರಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ: ಮಲ ತಂದೆಗೆ 20 ವರ್ಷ ಜೈಲು ಶಿಕ್ಷೆ

**ಕಲಬುರಗಿ,ಜೂ.19–**ಅಪ್ರಾಪ್ತ ವಯಸ್ಸಿನ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ ಮಲ ತಂದೆಯಾದ ಆರೋಪಿಗೆ ಇಲ್ಲಿನ ಅಪರ ಜಿಲ್ಲಾ ಮತ್ತು ಸತ್ರ (ವಿಶೇಷ ಪೋಕ್ಸೋ) ನ್ಯಾಯಾಲಯ 20 ವರ್ಷ ಕಠಿಣ ಜೈಲು ಶಿಕ್ಷೆ ಮತ್ತು 25 ಸಾವಿರ ರೂ.ದಂಡ ವಿಧಿಸಿದೆ.

ಹರಿಶ್ಚಂದ್ರ ತಂದೆ ಬಿಲ್ಲು ಚವ್ಹಾಣ್ (45) ಶಿಕ್ಷೆಗೆ ಗುರಿಯಾದ ಆರೋಪಿ. ಈತ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ ಬಗ್ಗೆ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ತನಿಖೆ ನಡೆಸಿದ ಸಬ್–ಅರ್ಬನ್ ಪೊಲೀಸ್ ಠಾಣೆ ಪಿಐ ಸಂತೋಷ ಎಲ್.ತಟ್ಟೆಪಳ್ಳಿ ಅವರು ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಅಪರ ಜಿಲ್ಲಾ ಮತ್ತು ಸತ್ರ (ವಿಶೇಷ ಪೋಕ್ಸೋ) ನ್ಯಾಯಾಲಯದ ನ್ಯಾಯಾಧೀಶ ಎಸ್.ಎಲ್.ಚವ್ಹಾಣ್ ಸಿ.ಜಿ.ಅವರು ಆರೋಪಿಗೆ ಪೋಕ್ಸೋ ಕಾಯ್ದೆ ಅಡಿಯಲ್ಲಿನ ಅಪರಾಧಕ್ಕೆ 20 ವರ್ಷ ಕಠಿಣ ಜೈಲು ಶಿಕ್ಷೆ ಮತ್ತು 25 ಸಾವಿರ ರೂ.ದಂಡ ವಿಧಿಸಿದ್ದಾರೆ.

ತೀರ್ಪಿನ ದಿನಾಂಕದಿಂದ ಒಂದು ತಿಂಗಳ ಅವಧಿಯೊಳಗೆ ನೊಂದ ಬಾಲಕಿಗೆ ಕಾನೂನು ಪ್ರಾಧಿಕಾರದ ವತಿಯಿಂದ 5 ಲಕ್ಷ ರೂಪಾಯಿ ಪರಿಹಾರ ನೀಡಬೇಕೆಂದು ನ್ಯಾಯಾಧೀಶರು ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ವಿಶೇಷ ಸರಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ವಾದ ಮಂಡಿಸಿದ್ದರು.

# ನಮ್ಮದು ಅಂಬೇಡ್ಕರ್ ರಕ್ತ; ಭಯಪಡುವ ಜಾಯಮಾನ ನನ್ನದಲ್ಲ, ರಮೇಶ್ ಜಿಗಜಿಣಗಿಗೆ ಪ್ರಿಯಾಂಕ್ ಖರ್ಗೆ ತಿರುಗೇಟು



**ಕಲಬುರಗಿ,ಜೂ.19–**ದಲಿತ ವ್ಯಕ್ತಿಗೆ ಆರ್‌ಎಸ್‌ಎಸ್ ಉಸಾಬರಿ ಯಾಕೆ ? ಆರ್ ಎಸ್ ಎಸ್ ತಂಟೆಗೆ ಬಂದವರು ಉಳಿದಿಲ್ಲ ಎಂಬ ಬಿಜೆಪಿ ಸಂಸದ ರಮೇಶ್ ಜಿಗಜಿಣಗಿ ಹೇಳಿಕೆಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ. ಡಾ.ಬಿ.ಆರ್.ಅಂಬೇಡ್ಕರ್ ಅವರ ಅನುಯಾಯಿಯಾಗಿ ಯಾರಿಗೂ ಭಯಪಡುವುದಿಲ್ಲ ಎಂದಿದ್ದಾರೆ.

ರಮೇಶ್ ಜಿಗಜಿಣಗಿ ಕುರಿತ ಹೇಳಿಕೆ ಕುರಿತು ಎಕ್ಸ್ ಪೋಸ್‌ನಲ್ಲಿ ಉತ್ತರಿಸಿರುವ ಪ್ರಿಯಾಂಕ್ ಖರ್ಗೆ, ಜಿಗಜಣಗಿ ಅವರ ಪ್ರಶ್ನೆಯುನ್ನು ವಿವಿಧ ಆಯಾಮಗಳಿಂದ ವಿಮರ್ಶಿಸಬೇಕಾಗಿದೆ. ದಲಿತ ಸಮುದಾಯದವರೇ ಆಗಿರುವ ರಮೇಶ್ ಜಿಗಜಿಣಗಿಯವರಿಗೆ ಆರ್‌ಎಸ್‌ಎಸ್ ಗರ್ಭಗುಡಿಯೊಳಗೆ ಪ್ರವೇಶ ಸಿಗದಿರುವ ಹತಾಶೆಯ ಮಾತೇ ? ಎಂದು ಪ್ರಶ್ನಿಸಿದ್ದಾರೆ.

ದಲಿತರಿಗೆ ಆರ್‌ಎಸ್‌ಎಸ್‌ವಿಷಯ ಯಾಕೆ ಬೇಕು ಎಂಬ ರಮೇಶ್ ಜಿಗಜಿಣಗಿಯವರು ನನಗೆ ಹೇಳಿರುವ ಮತ್ತು ಕೇಳಿರುವ ಪ್ರಶ್ನೆಗೆ ಉತ್ತರ ಎಂದು ಅವರು ಬರೆದುಕೊಂಡಿದ್ದು, ಶ್ರೇಣಿಕೃತ ವ್ಯವಸ್ಥೆಯ ಮೂಲಭೂತವಾದವನ್ನು ನಂಬಿರುವ ಆರ್‌ಎಸ್‌ಎಸ್ ಸಹವಾಸಕ್ಕೆ ದಲಿತರು ಹೋಗಬೇಡಿ ಎಂದ ಎಚ್ಚರಿಕೆಯ ಮಾತುಗಳೇ ? ಎಂದಿದ್ದಾರೆ.


ಸಮಾಜದಲ್ಲಿನ ಮೇಲರಿಮೆಯ ಮನಸ್ಥಿತಿಯ ಜನರ ಹಿತಾಸಕ್ತಿ ಕಾಯಲು ರೂಪುಗೊಂಡಿರುವ ಆರ್‌ಎಸ್‌ಎಸ್‌ಅನ್ನು ಪ್ರಶ್ನೆ ಮಾಡಲು ದಲಿತನಾಗಿ ನಿನಗೆ ಅರ್ಹತೆ ಇಲ್ಲ ಎಂದು ನನಗೆ ಹೇಳಿರುವ ಕುಹುಕುದ ಮಾತುಗಳೇ ? ಆರ್‌ಎಸ್‌ಎಸ್ ನಂತಹ ವ್ಯವಸ್ಥೆಯನ್ನು ಸಂವಿಧಾನದ ಹಾದಿಗೆ ತರಲು ದಲಿತರಿಗೆ ಸಾಧ್ಯವಿಲ್ಲ ಎಂಬ ಹತಾಶೆಯ ಮಾತುಗಳೇ ? ಎಂದು ಪ್ರಶ್ನಿಸಿದ್ದಾರೆ. ಈ ಬೆದರಿಕೆ ಹಿಂದಿರುವ ಕಾರಣಗಳೇನು ? ಯಾರು ಉಳಿದಿಲ್ಲ ಎಂದರೆ ಏನರ್ಥ, ಆರ್‌ಎಸ್‌ಎಸ್ ಭಯೋತ್ಪಾದಕ ಸಂಘಟನೆಯೇ? ಪ್ರಶ್ನಿಸುವವರನ್ನು ಮುಗಿಸುತ್ತದೆಯೇ ಎಂದು ಕೇಳಿದ್ದಾರೆ.

ನಾನು ಬಾಬಾ ಸಾಹೇಬರ ಸಿದ್ಧಾಂತದವನು, ಪ್ರಶ್ನಿಸುವ ಧೈರ್ಯ ಮತ್ತು ವೈಚಾರಿಕತೆ ಅವರಿಂದಲೇ ಬಂದಿರುವುದು, ಬಾಬಾ ಸಾಹೇಬರನ್ನು ನಂಬಿದವರಿಗೆ "ಅಂಜಿಕೆ" ತಿಳಿದಿರುವುದಿಲ್ಲ.

ನಾನು ಸಂವಿಧಾನದ ರಕ್ಷಣೆಯ ನೆರಳಲ್ಲಿರುವವರು ಸಂವಿಧಾನದಡಿಯಲ್ಲಿ ಮಾನ್ಯತೆಯೇ ಇಲ್ಲದವರಿಗೆ ಭಯಪಡುವ ಜಾಯಮಾನ ನನ್ನದಲ್ಲ.

ನಾನು ಅಂಜುವುದು ನೈತಿಕತೆಗೆ ಹೊರತು, ಬೆದರಿಕೆಗಳಿಗಲ್ಲ, ಏಕೆಂದರೆ ನಮ್ಮದು ಅಂಬೇಡ್ಕರ್‌ರವರ ರಕ್ತ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

# ವಿವಿಧ ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ



**ಬಳ್ಳಾರಿ,ಜೂ.19:** ಜಿಲ್ಲಾಡಳಿತದಿಂದ ವಿವಿಧ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು. ಇದಕ್ಕೆ ಬೇಕಾದ ಎಲ್ಲಾ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಹೇಳಿದರು.

ವಿವಿಧ ಮಹನೀಯರ ಜಯಂತಿಗಳ ಆಚರಣೆ ಕುರಿತು ಅಪರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಕೇಂದ್ರದಲ್ಲಿ ಜೂ.27 ರಂದು ಕೆಂಪೇಗೌಡ ಜಯಂತಿ ಮತ್ತು ಜುಲೈ 02 ರಂದು ಡಾ.ಫ.ಗು.ಹಳಕಟ್ಟಿಯವರ ಜನ್ಮದಿನ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ನಿರ್ಧಾರ ಕೈಗೊಳ್ಳಲಾಯಿತು.

ಇಬ್ಬರೂ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ನಗರದ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಆಯೋಜಿಸಲಾಗುವುದು. ಮಹನೀಯರ ಸಾಧನೆ ಮತ್ತು ಕಾರ್ಯಗಳ ಬಗ್ಗೆ ಬಿತ್ತರಿಸಲು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಆಯೋಸಬೇಕು. ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

# ಎಲೆಕ್ಟೋರಲ್ ಲಿಟರಸಿ ಕ್ಲಬ್ ಸಕ್ರಿಯಗೊಳಿಸುವಂತೆ ಜಿಪಂ ಸಿಇಒ ಸೂಚನೆ



**ಬಳ್ಳಾರಿ,ಜೂ.19–** ಜಿಲ್ಲೆಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳು, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಸ್ಥಾಪಿಸಲಾಗಿರುವ ಎಲೆಕ್ಟೋರಲ್ ಲಿಟರಸಿ ಕ್ಲಬ್ ಗಳ ಮೂಲಕ ಕಡ್ಡಾಯವಾಗಿ ಸ್ವೀಪ್ ಚಟುವಟಿಕೆಗಳನ್ನು ಆಯೋಜಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಎಲೆಕ್ಟೋರಲ್ ಲಿಟರಸಿ ಕ್ಲಬ್ ಗಳ ಮೂಲಕ ಸ್ವೀಪ್ ಚಟುವಟಿಕೆ ಆಯೋಜಿಸುವ ಕುರಿತು ನಗರದ ಜಿಲ್ಲಾ ಪಂಚಾಯತ್ ನ ಹಳೆಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯುವ ಜನತೆಯಲ್ಲಿ, ವಿಶೇಷವಾಗಿ ಪ್ರಥಮ ಬಾರಿಗೆ ಮತದಾನ ಮಾಡುವವರಲ್ಲಿ (18 ವರ್ಷ ತುಂಬಲಿರುವ ವಿದ್ಯಾರ್ಥಿಗಳಲ್ಲಿ) ಚುನಾವಣಾ ಸಾಕ್ಷರತೆಯನ್ನು ಮೂಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಕಾಲೇಜು ಮತ್ತು ವಿಶ್ವವಿದ್ಯಾಲಯ ಹಂತದಲ್ಲಿ ವಿದ್ಯಾರ್ಥಿಗಳನ್ನು ಕೇವಲ ಶೈಕ್ಷಣಿಕವಾಗಿ ಮಾತ್ರವಲ್ಲದೆ, ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಲು ಈ ಕ್ಲಬ್‌ಗಳು ನೆರವಾಗಲಿವೆ ಎಂದು ತಿಳಿಸಿದರು.

ಮುಂದಿನ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ಮಹತ್ವದ ಕ್ರಮ ಕೈಗೊಳ್ಳಲಾಗಿದೆ. ಇದು ಭಾರತೀಯ ಚುನಾವಣಾ ಆಯೋಗದ ಅತ್ಯಂತ ಪ್ರಮುಖ ಕಾರ್ಯಕ್ರಮವಾಗಿದ್ದು, ಮತದಾರರ ಶಿಕ್ಷಣ, ಮತದಾನದ ಜಾಗೃತಿ ಮೂಡಿಸುವುದು ಮತ್ತು ತನ್ಮೂಲಕ ದೇಶದಲ್ಲಿ ಸಾಕ್ಷರತಾ ಮತದಾನವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದರು.

18 ವರ್ಷ ತುಂಬಿದ ಅಥವಾ ತುಂಬಲಿರುವ ಪ್ರತಿಯೊಬ್ಬ ವಿದ್ಯಾರ್ಥಿಯ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ವಿಶೇಷ ನೋಂದಣಿ ಡ್ರೈವ್‌ಗಳನ್ನು ನಡೆಸುವುದು. ಮತದಾನದ ಮಹತ್ವ ಸಾರುವ ಪ್ರಬಂಧ ಸ್ಪರ್ಧೆ, ಭಾಷಣ, ಚಿತ್ರಕಲೆ, ರಂಗೋಲಿ ಹಾಗೂ ಬೀದಿ ನಾಟಕಗಳನ್ನು ಆಯೋಜಿಸುವುದು. ವಿದ್ಯಾರ್ಥಿಗಳ ಮೂಲಕ ಅವರ ಪೋಷಕರು ಹಾಗೂ ಸುತ್ತಮುತ್ತಲಿನ ಸಾರ್ವಜನಿಕರಲ್ಲಿ ಮತದಾನದ ಜಾಗೃತಿ ಮೂಡಿಸುವುದು ಇಎಲ್‌ಸಿ ಸಂಯೋಜಕರ ಚಟುವಟಿಕೆಗಳಾಗಿವೆ ಎಂದು ಅವರು ತಿಳಿಸಿದರು.

ಹಾಗಾಗಿ ಎಲ್ಲಾ ಖಾಸಗಿ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿ ಇಎಲ್‌ಸಿ ಕ್ಲಬ್‌ಗಳು ಸಕ್ರಿಯವಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಈ ಚಟುವಟಿಕೆಗಳ ಪ್ರಗತಿಯನ್ನು ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದು ಹೇಳಿದರು.

ಜಿಲ್ಲಾದ್ಯಂತ ಈ ತಿಂಗಳ 22 ರಂದು ಹಬ್ಬದ ವಾತಾವರಣದಲ್ಲಿ ವಿಶೇಷ ಗ್ರಾಮ ಸಭೆ'ಯನ್ನು ಆಯೋಜಿಸಲಾಗುತ್ತಿದ್ದು, ಅಂದು ಎಲ್ಲಾ ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಮತದಾರರ ಸಾಕ್ಷರತಾ ಕ್ಲಬ್‌ಗಳ ವತಿಯಿಂದ ಎಸ್‌ಐಆರ್ ಕುರಿತು ವಿಶೇಷ ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು. ಅಂದು ಕನಿಷ್ಠ ಒಂದು ಗಂಟೆಯ ಅವಧಿಗೆ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಹಾಜರಿದ್ದು, ಎಫ್‌ಐಆರ್ ಪ್ರಕ್ರಿಯೆಯ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಳ್ಳಬೇಕು ಎಂದು ಸೂಚಿಸಿದರು.

ಈ ವಿಶೇಷ ಅಭಿಯಾನದ ಮೂಲಕ ಎಸ್‌ಎಸ್‌ಐಆರ್ ಪಟ್ಟಿಯಲ್ಲಿ ಒಬ್ಬನೇ ಒಬ್ಬ ಯುವ ಮತದಾರ ಅಥವಾ ಅನಕ್ಷರಸ್ಥ ಕುಟುಂಬದ ಸದಸ್ಯನ ಹೆಸರು ಸೇರ್ಪಡೆಯಾದರೂ, ಅಥವಾ ಅನಗತ್ಯ ಹೆಸರುಗಳನ್ನು ಕೈಬಿಟ್ಟರೂ ಅದು ಈ ಕಾರ್ಯಕ್ರಮದ ಬಹುದೊಡ್ಡ ಯಶಸ್ಸು ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರ ಶಿವಲಿಂಗ ರೆಡ್ಡಿ ಅವರು ಮಾತನಾಡಿ, ರಾಜ್ಯದಲ್ಲಿ ಹೊಸ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ಮಹತ್ವದ 'ಎಸ್‌ಐಆರ್' ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಹಿಂದೆ ಕೇವಲ ಮತದಾರರ ಪಟ್ಟಿ ನವೀಕರಣ, ಹೆಸರು ತೆಗೆದುಹಾಕುವುದು ಹಾಗೂ ಸ್ಥಳಾಂತರದಂತಹ ಅರ್ಡಡೇಶಕಗಳಿಗಾಗಿ ಎಸ್‌ಎಸ್‌ಐಆರ್‌ಪ್ರಕ್ರಿಯೆ ನಡೆಸಲಾಗುತ್ತಿತ್ತು. ಆದರೆ, ಪ್ರಸ್ತುತ ಜಾರಿಯಲ್ಲಿರುವ ಎಸ್‌ಐಆರ್ ಪ್ರಕ್ರಿಯೆಯು ಸಂಪೂರ್ಣವಾಗಿ ಹೊಸ ಮತದಾರರ ಪಟ್ಟಿಯನ್ನು ತಯಾರಿಸುವ ಉದ್ದೇಶವನ್ನು ಹೊಂದಿದೆ. ಈ ಹಿನ್ನೆಲೆಯಲ್ಲಿ ಇಎಲ್‌ಸಿ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಶಾಲಾ–ಕಾಲೇಜುಗಳ ಅಧಿಕಾರಿಗಳು ಕೈಜೋಡಿಸಬೇಕು ಎಂದು ಹೇಳಿದರು.

ಹೊಸ ಮತದಾರರ ಪಟ್ಟಿ ತಯಾರಿಕೆಗೆ 2025 ರ ವೋಟರ್ ಲಿಸ್ಟ್ ಅನ್ನು ಆಧಾರವಾಗಿಟ್ಟುಕೊಂಡು 'ಪ್ರೀ–ಪ್ರಿಂಟೆಡ್' ಫಾರ್ಮಗಳನ್ನು ಸಿದ್ಧಪಡಿಸಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು ಶೀಘ್ರದಲ್ಲೇ ಮನೆ ಮನೆಗೆ ಭೇಟಿ ನೀಡುವರು. ಬಿಎಲ್‌ಒಗಳು ಪ್ರತಿ ಮತದಾರರಿಗೆ ಎರಡು ಪ್ರತಿಗಳಿರುವ 'ಎನ್ಯೂಮರೇಷನ್ ಫಾರ್ಮ್' ನೀಡಲಿದ್ದಾರೆ. ಸಾರ್ವಜನಿಕರು ಒಂದನ್ನು ಭರ್ತಿ ಮಾಡಿ ಬಿಎಲ್‌ಒಗೆ ನೀಡಬೇಕು ಹಾಗೂ ಮತ್ತೊಂದು ಪ್ರತಿಯಲ್ಲಿ ಬಿಎಲ್‌ಒ ಅವರಿಂದ ಸಹಿ ಪಡೆದು ಸ್ವೀಕೃತಿ ಇಟ್ಟುಕೊಳ್ಳಬೇಕು ಎಂದು ವಿವರಿಸಿದರು.

ಇನ್ನೋರ್ವ ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರ ಅಕ್ಕಿ ಮಲ್ಲಿಕಾರ್ಜುನ ಅವರು ಮಾತನಾಡಿ, 2002 ರ ಹಳೆಯ ಫೋಟೋಗಳ ಬದಲಾಗಿ ಪ್ರಸ್ತುತ ಪಟ್ಟಿಗಾಗಿ ಸಾರ್ವಜನಿಕರು ತಮ್ಮ ಹೊಸ ಭಾವಚಿತ್ರವನ್ನು ಸಿದ್ಧವಾಗಿಟ್ಟುಕೊಂಡು ಬಿಎಲ್‌ಒಗಳಿಗೆ ನೀಡಬೇಕು. ಈ ಪ್ರೀ–ಪ್ರಿಂಟೆಡ್ ಫಾರ್ಮಗಳು ಕ್ಯೂಆರ್ ಕೋಡ್ ಒಳಗೊಂಡಿದ್ದು, ಅತ್ಯಂತ ಗೌಪ್ಯವಾಗಿವೆ. ಇವುಗಳನ್ನು ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಪ್ರದರ್ಶಿಸುವಂತಿಲ್ಲ ಹಾಗೂ ಹೊರಗಡೆ ಕೊಂಡೊಯ್ಯುವಂತಿಲ್ಲ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಕಸ್ತೂರಿ, ಜಿಲ್ಲಾ ಪಂಚಾಯತ್ ನ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ ಸೇರಿದಂತೆ ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳು, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಜಿಲ್ಲಾ ಪಂಚಾಯತ್ ನ ಪ್ರಥಮ ದರ್ಜೆ ಸಹಾಯಕ ಸುಹೇಲ್ ಸ್ವಾಗತಿಸಿದರು. ವಿಜಯ್ ಕುಮಾರ್ ವಂದಿಸಿದರು.

# ಸಂಸದ ಈ.ತುಕಾರಾಂ ವಿರುದ್ಧ ಬಿಜೆಪಿ ಕಾರ್ಯಕರ್ತರಿಂದ ಬೃಹತ್ ಪ್ರತಿಭಟನೆ



**ಹೊಸಪೇಟೆ. ಜೂ.19** ಬಳ್ಳಾರಿ, ವಿಜಯನಗರ ಅವಳಿ ಜಿಲ್ಲೆಗಳ ಸಂಸದ ಈ.ತುಕಾರಾಂ ಅವರು, ಕಳಪೆ ಕಾಮಗಾರಿ ಪ್ರಶ್ನಿಸಿದ ವ್ಯಕ್ತಿಯ ವಿರುದ್ಧ ಅವಹೇಳನಕಾರಿ ಆಗಿ ಮಾತನಾಡಿರುವುದನ್ನು ಖಂಡಿಸಿ, ನಗರದಲ್ಲಿಂದು ಬಿಜೆಪಿ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.

ಸ್ಥಳೀಯ ಬಿಜೆಪಿ ಕಛೇರಿಯಿಂದ ಪ್ರತಿಭಟನಾ ಮೆರವಣಿಗೆ ನಡೆಸುವ ಮೂಲಕ ಆಗಮಿಸಿದ ಬಿಜೆಪಿ ಕಾರ್ಯಕರ್ತರು ಡಾ.ಪುನೀತ್ ರಾಜ್ ಕುಮಾರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ತುಕಾರಾಂ ಅವರ ಭಾವಚಿತ್ರಗಳನ್ನು ತುಳಿದು ತಮ್ಮ ಆಕ್ರೋಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಸಂಜೀವ ರೆಡ್ಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಳಪೆ ಕಾಮಗಾರಿ ಪ್ರಶ್ನಿಸುವುದು ತಪ್ಪಲ್ಲ. ಪ್ರಶ್ನೆ ಮಾಡಿದ ಯವಕನ ವಿರುದ್ಧ ಅವಹೇಳನಕಾರಿ ಮಾತನಾಡಿರುವುದು ಅಲ್ಲದೆ. ಯುವಕನ ವಿರುದ್ಧ ದೌರ್ಜನ್ಯ ದಬ್ಬಾಳಿಕೆ ಮಾಡಿರುವುದು ತೀವ್ರ ಖಂಡನಿಯ. ಎಸ್.ಸಿ, ಎಸ್.ಟಿ ದುರ್ಬಳಕೆ ಮಾಡಿಕೊಂಡು ಸಂಸದರಾಗಿರುವ ತುಕಾರಾಂ ನೈತಿಕ ಹೊಣೆಹೊತ್ತು. ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಕೃಷ್ಣನಾಯ್ಕ್, ಕಳಪೆ ಕಾಮಗಾರಿ ಪ್ರಶ್ನಿಸಿದ ವ್ಯಕ್ತಿಯ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡುವ ಮೂಲಕ ಅಮಾಯಕ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿರುವುದು ತೀವ್ರ ಖಂಡನೀಯ ಎಂದರು.

ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಕಿಚಿಡಿ ಕೊಟ್ರೇಶ್ ಮಾತನಾಡಿ, ಕಳಪೆ ಕಾಮಗಾರಿ ಯನ್ನು ಪ್ರಶ್ನಿಸಿದ್ದ ಯುವಕನ ವಿರುದ್ಧ ಅವಹೇಳನ ಕಾರಿ ಆಗಿ ಮಾತನಾಡಿದ್ದು.ಅಲ್ಲದೆ ಹಲ್ಲೆ ನಡೆಸಿರುವುದು ತೀವ್ರ ಖಂಡನೀಯ. ಇದು ಬಹಳ ದಿನ ನಡೆಯುವುದಿಲ್ಲ. ಇದರ ನೈತಿಕ ಹೊಣೆ ಹೊತ್ತು. ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಸಂದೀಪ್ ಸಿಂಗ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ಎಸ್.ರಾಘವೇಂದ್ರ, ಮುಖಂಡರಾದ ಸಚಿನ್, ಮಧುರಚನ್ನಶಾಸ್ತ್ರಿ, ರಾಘವೇಂದ್ರ, ಇಮ್ತಿಯಾಜ್ ಗೌಳಿ ರುದ್ರಪ್ಪ, ರೇಣುಕಾ, ವಿಜಯಲಕ್ಷ್ಮಿ, ಅನುರಾಧ ಸೇರಿದಂತೆ ಕಾರ್ಯಕರ್ತರು ಭಾಗವಹಿಸಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE